ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 213

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಭಾನುವಾರ: 02-08-2026

# ಪರೀಕ್ಷಾ ಅಕ್ರಮ ತಡೆಗೆ ಬಿಗಿ ಕ್ರಮ : ಗೃಹ ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಜು.31–** ಪ್ರಶ್ನೆ ಪತ್ರಿಕೆಗಳ ಸೋರಿಕೆ, ಪರೀಕ್ಷಾ ನಕಲು ಹಾಗೂ ಅಕ್ರಮಗಳನ್ನು ತಡೆಯಲು ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಗಳನ್ನು ಯಾದೃಚ್ಛಿಕೀಕರಣ (ಯಾರ್ಂಡಮೈಜೆಷನ್) ನಡೆಸಲಾಗುತ್ತಿದೆ. ಜೊತೆಗೆ ಅನೇಕ ಬಿಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತಂತೆ ನಿನ್ನೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಸುಮಾರು ಮೂರೂವರೆ ಗಂಟೆಗಳ ಕಾಲ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಕರ್ನಾಟಕ ಲೋಕಸೇವಾ ಆಯೋಗ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಸುದೀರ್ಘ ಸಭೆ ನಡೆಸಲಾಗಿದೆ ಎಂದು ಹೇಳಿದರು.

ಹಣಕಾಸು ಇಲಾಖೆಯಿಂದ 74 ಸಾವಿರ ಹುದ್ದೆಗಳ ನೇಮಕಾತಿಗೆ ಈಗಾಗಲೇ ಅನುಮೋದನೆ ದೊರೆತಿದೆ. ಮುಂದಿನ ಒಂದು ವರ್ಷದಲ್ಲಿ ಇವುಗಳಿಗೆ ನೇಮಕಾತಿ ನಡೆಯಲಿದೆ. ಮೊದಲ ಹಂತದಲ್ಲಿ ಮುಂದಿನ ಆರು ತಿಂಗಳೊಳಗೆ 36,773 ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಿ ಲಿಖಿತ ಪರೀಕ್ಷೆಗಳನ್ನು ನಡೆಸಲಾಗುವುದು. ಸುಮಾರು 35 ಲಕ್ಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದರು.

ಇತ್ತಿ?ಚಿನ ದಿನಗಳಲ್ಲಿ ದೇಶದ ನೀಟ್ ಸೇರಿದಂತೆ ಹಲವು ಪರೀಕ್ಷೆಗಳಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಕಂಡು ಬಂದಿದೆ. ಆ ಗೊಂದಲಗಳು ರಾಜ್ಯದಲ್ಲಿ ಮರುಕಳಿಸದಂತೆ ಮುಖ್ಯಮಂತ್ರಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಹೊಣೆಗಾರಿಕೆ ನೀಡಿದ್ದಾರೆ ಎಂದು ಹೇಳಿದರು.

ಪ್ರಶ್ನೆ ಪತ್ರಿಕೆ ಸೋರಿಕೆಗೆ ಅವಕಾಶವೇ ಇಲ್ಲದಂತೆ ಈ ಬಾರಿ ಹಲವು ಹೊಸ ಭದ್ರತಾ ಕ್ರಮಗಳನ್ನು ಜಾರಿಗೊಳಿಸಲಾಗಿದೆ. ಒಂದೇ ಪ್ರಶ್ನೆ ಪತ್ರಿಕೆಯ ಬದಲಿಗೆ ವಿವಿಧ ಮಾದರಿಯ ಪ್ರಶ್ನೆ



ಪತ್ರಿಕೆಗಳನ್ನು ಸಿದ್ಧಪಡಿಸಿ, ಪ್ರಶ್ನೆ ಪತ್ರಿಕೆಗಳ ಬ್ಯಾಂಕ್ ನಿರ್ಮಿಸಲಾಗಿದೆ. ವಿಷಯವಾರು ಮತ್ತು ನಿಗದಿತ ಪ್ರಮಾಣದಲ್ಲಿ ವಿವಿಧ ಸೆಟ್‌ಗಳ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸಲಾಗಿದ್ದು, ಯಾವ ಪ್ರಶ್ನೆ ಪತ್ರಿಕೆ ಬಳಸಬೇಕು ಎಂಬುದು ಅಂತಿಮ ಕ್ಷಣದವರೆಗೆ ಗೌಪ್ಯವಾಗಿರಲಿದೆ ಎಂದು ವಿವರಿಸಿದರು.ಪ್ರಶ್ನೆ ಪತ್ರಿಕೆಯ ಟ್ರಂಕ್ ಅಥವಾ ಕವರ್ ಅನ್ನು ಪರೀಕ್ಷೆ ಆರಂಭಕ್ಕೂ ಮುನ್ನ ತೆರೆಯಲಾಗಿದೆ ಎಂಬ ಆರೋಪಗಳು ಕೇಳಿ ಬಂದಿದ್ದವು. ಈ ಬಾರಿ ಬಹುಪದರ ಭದ್ರತಾ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಯಾವುದೇ ಅನಧಿಕೃತ ವ್ಯಕ್ತಿ ಪ್ರಶ್ನೆ ಪತ್ರಿಕೆ ಇರುವ ಟ್ರಂಕ್ ತೆರೆಯಲು ಅಥವಾ ಭದ್ರತಾ ವ್ಯವಸ್ಥೆ ಭೇದಿಸಲು ಯತ್ನಿಸಿದರೆ ತಕ್ಷಣವೇ ಎಚ್ಚರಿಕೆಯ ಸೈರನ್ ಮೊಳಗಲಿದೆ.

ಪ್ರಶ್ನೆ ಪತ್ರಿಕೆಗಳ ಮುದ್ರಣ ಹಾಗೂ ಸಾಗಾಣಿಕೆ ಹಂತದಲ್ಲೂ ಕಟ್ಟುನಿಟ್ಟಿನ ಭದ್ರತೆ ಕಲ್ಪಿಸಲಾಗಿದೆ. ಹೊರ ರಾಜ್ಯಗಳಲ್ಲಿ ಬಿಗಿ ಭದ್ರತೆ ಇರುವ ಕಡೆ ಪ್ರಶ್ನೆ ಪತ್ರಿಕೆ ಮುದ್ರಿಸಲಾಗಿದೆ. ಸಾಗಾಣಿಕೆ ಹಂತದಲ್ಲೂ ಪ್ರಮಾಣಿತ ಕಾರ್ಯವಿಧಾನ ಪಾಲಿಸಲಾಗುತ್ತಿದೆ ಎಂದು ಹೇಳಿದರು.ಈ ಹಿಂದೆ ಪರೀಕ್ಷಾ ಕೇಂದ್ರದ ಸುತ್ತಮುತ್ತ ಮಾತ್ರ ಜಾಮರ್ ಅಳವಡಿಸಲಾಗುತ್ತಿತ್ತು. ಈಗ ಪ್ರತಿಯೊಂದು ಪರೀಕ್ಷಾ ಕೊಠಡಿಯಲ್ಲೂ ಜಾಮರ್ ಅಳವಡಿಸಲಾಗುತ್ತಿದೆ.

ತನೂಲಕ ಮೊಬೈಲ್ ಅಥವಾ ಇತರೆ ತಂತ್ರಜ್ಞಾನದ ಮೂಲಕ ಪ್ರಶ್ನೆ ಪತ್ರಿಕೆ ಹೊರಹೋಗದಂತೆ ತಡೆಯಲಾಗುವುದು ಎಂದು ವಿವರಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ನಕಲು ತಡೆಯಲು ಅಭ್ಯರ್ಥಿಗಳ ಪ್ರಶ್ನೆ ಪತ್ರಿಕೆಗಳನ್ನು ಯಾರ್ಂಡಮೈಸೇಶನ್ ಪದ್ಧತಿಯ ಮೂಲಕ ವಿತರಿಸಲಾಗುತ್ತದೆ. ಉದಾಹರಣೆಗೆ ಒಂದು ಕೊಠಡಿಯಲ್ಲಿ 25 ಅಭ್ಯರ್ಥಿಗಳಿದ್ದರೆ ಪ್ರತಿಯೊಬ್ಬರಿಗೂ ವಿಭಿನ್ನ ಕ್ರಮಾಂಕದ ಪ್ರಶ್ನೆ ಪತ್ರಿಕೆ ನೀಡಲಾಗುತ್ತದೆ. ಇದರಿಂದ ಕಾಪಿ ಮಾಡುವ ಸಾಧ್ಯತೆ ಕಡಿಮೆಯಾಗಲಿದೆ ಎಂದು ಹೇಳಿದರು.

**ಓಎಂಆರ್ ತಿದ್ದುಪಡಿಗೆ ಅವಕಾಶವಿಲ್ಲ:** ಓಎಂಆರ್ ಉತ್ತರ ಪತ್ರಿಕೆಗಳಲ್ಲಿ ತಿದ್ದುಪಡಿ ಮಾಡುವ ಅವಕಾಶವೇ ಇರದಂತೆ ಪರೀಕ್ಷೆ ನಡೆದ ದಿನವೇ ಅಥವಾ 24 ಗಂಟೆಗಳೊಳಗೆ ಉತ್ತರ ಪತ್ರಿಕೆಗಳ ಓಎಂಆರ್ ಶೀಟ್ ಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಿದರು.

ಶಿಕ್ಷಣ ಇಲಾಖೆ ಅಧಿಕಾರಿಗಳು ಪರೀಕ್ಷಾ ಕೇಂದ್ರಗಳ ನಿರ್ವಹಣೆಗೆ ಪೂರ್ಣ ಸಹಕಾರ ನೀಡಬೇಕು. ಫ್ಲೈಯಿಂಗ್ ಸ್ಕ್ವಾಡ್ ಗಳು 24 ಗಂಟೆ ಮೊದಲೇ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಶುದ್ಧಿಕರಣವನ್ನು ಪರಿಶೀಲಿಸಬೇಕು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಬರ್ಂಧಾಜ್ಞೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಸೂಚಿಸಲಾಗಿದೆ.

**ಕಾರ್ಯಸೂಚಿ:**ಪ್ರಶ್ನೆ ಪತ್ರಿಕೆ ಹಾಗೂ ಓಎಂಆರ್ ಶೀಟ್‌ಗಳನ್ನು ಕನಿಷ್ಠ ಐದು ಅಭ್ಯರ್ಥಿಗಳ ಸಮುಖದಲ್ಲೆ ತೆರೆಯಬೇಕು. ಪರೀಕ್ಷಾ ಕೇಂದ್ರಗಳನ್ನು 24 ಗಂಟೆಗಳ ಮುಂಚಿತವಾಗಿ ಸಂಪೂರ್ಣ ಪರಿಶೀಲಿಸಿ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲೆಡೆ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಗೃಹ ಇಲಾಖೆ ಪ್ರಮಾಣಿತ ಕಾರ್ಯಸೂಚಿ ಹೊರಡಿಸಿದೆ ಎಂದು ಹೇಳಿದರು.

**ಅಧಿಕಾರಿಗಳಿಗೂ ಮೊಬೈಲ್ ನಿಷೇಧ:** ಪರೀಕ್ಷಾ ಕರ್ತವ್ಯಕ್ಕೆ ನಿಯೋಜನೆಯಾಗಿರುವ ಅಧಿಕಾರಿಗಳಿಗೂ 2ನೇ ಪುಟಕ್ಕೆ

# ವಾಣಿಜ್ಯ ಎಲ್‌ಪಿಜಿ ದರ 200 ರೂ. ಇಳಿಕೆ

**ನವದೆಹಲಿ/ಬೆಂಗಳೂರು.ಆ1:**ಸಾರ್ವಜನಿಕ ರಂಗದ ತೈಲ ಮಾರುಕಟ್ಟೆ ಕಂಪನಿಗಳು ಆಗಸ್ಟ್ 1ರಿಂದ ಜಾರಿಗೆ ಬರುವಂತೆ 19 ಕೆಜಿ ತೂಕದ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ 200ರೂ. ಇಳಿಕೆ ಮಾಡಿವೆ. ಪಶ್ಚಿಮ ಏಷ್ಯಾ ಬಿಕ್ಕಟ್ಟು ಮತ್ತು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿನ ಏರಿಳಿತಗಳ ನಡುವೆಯೂ ಸತತ ಎರಡನೇ ತಿಂಗಳು ಬೆಲೆ ಇಳಿಕೆ ಮಾಡಿರುವುದು ವಾಣಿಜ್ಯ ವಲಯಕ್ಕೆ ದೊಡ್ಡ ರಿಲೀಫ್ ನೀಡಿದೆ.ಆದಾಗ್ಯೂ, ಮನೆಗಳಲ್ಲಿ ಬಳಸುವ 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ದರದಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ."ಕಳೆದ ಕೆಲವು ತಿಂಗಳುಗಳಿಂದ ಸತತವಾಗಿ ಏರಿಕೆಯಾಗುತ್ತಿದ್ದ ವಾಣಿಜ್ಯ ಸಿಲಿಂಡರ್ ದರದಿಂದ ಹೋಟೆಲ್, ರೆಸ್ಟೋರೆಂಟ್ ಹಾಗೂ ಸಣ್ಣ ಉದ್ಯಮಗಳು ಸಂಕಷ್ಟಕ್ಕೀಡಾಗಿದ್ದವು. ಜುಲೈ ಹಾಗೂ ಆಗಸ್ಟ್ ತಿಂಗಳಲ್ಲಿ ಅನುಕ್ರಮವಾಗಿ ಬೆಲೆ ಇಳಿಕೆಯಾಗಿರುವುದು ನಿರ್ವಹಣಾ ವೆಚ್ಚ ತಗ್ಗಿಸಲು ನೆರವಾಗಲಿದೆ" ಎಂದು ಹೋಟೆಲ್ ಮಾಲೀಕರ ಸಂಘ ಹರ್ಷ ವ್ಯಕ್ತಪಡಿಸಿದೆ.ಪಶ್ಚಿಮ ಏಷ್ಯಾದಲ್ಲಿ ಸಂಭವಿಸಿದ ಬಿಕ್ಕಟ್ಟಿನಿಂದಾಗಿ ಜಾಗತಿಕ ಇಂಧನ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದ್ದರೂ, ಭಾರತದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಅಭಾವ ಉಂಟಾಗದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಂಡಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಮತ್ತು ಹಿರಿಯ ಅಧಿಕಾರಿಗಳ ಉನ್ನತ ಮಟ್ಟದ ಸಭೆಯಲ್ಲಿ ದೇಶದ ಇಂಧನ ಭದ್ರತೆಯ ಪರಿಶೀಲನೆ ನಡೆಸಲಾಗಿದೆ.

ಮಧ್ಯಪ್ರಾಚ್ಯದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು, ಭಾರತವು 2027ರಿಂದ ತನ್ನ ಎಲ್‌ಪಿಜಿ ಅಗತ್ಯದ ಶೇ. 25ರಷ್ಟನ್ನು ಅಮೆರಿಕದಿಂದ ಆಮದು ಮಾಡಿಕೊಳ್ಳಲು ಯೋಜನೆ ರೂಪಿಸಿದೆ.

5 ಕೆ.ಜಿ. ಸಿಲಿಂಡರ್ ದರ ಇಳಿಕೆ: ಐದು ಕೆ.ಜಿ. ಫ್ರೀ ಟ್ರೇಡ್ ಎಲ್‌ಪಿಜಿ ಸಿಲಿಂಡರ್ ದರವನ್ನು ಶೇ. 13 ರಷ್ಟು ತೈಲ ಕಂಪನಿಗಳು ಕಡಿಮೆ ಮಾಡಿವೆ.ದೆಹಲಿಯಲ್ಲಿ ಸಿಲಿಂಡರ್ ಚಿಲ್ಲರೆ ಬೆಲೆ 808.50 ರೂ.ಗಳಿಗೆ ಪರಿಷ್ಕರಿಸಲಾಗಿದೆ.

ಕಳೆದ ಜೂನ್‌ನಲ್ಲಿ 14.2 ಕೆ.ಜಿ. ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆ 29ರೂ. ಗಳಷ್ಟು ಹೆಚ್ಚಾಗಿದ್ದು ದೆಹಲಿಯಲ್ಲಿ ಚಿಲ್ಲರೆ ಬೆಲೆ 913ರೂ. ಗಳಿಂದ 942 ರೂ.ಗಳಿಗೆ ಏರಿಕೆಯಾಗಿದೆ.

ಪ್ರಮುಖ ನಗರಗಳಲ್ಲಿ ಹೊಸ ದರಗಳ ವಿವರ

ದೆಹಲಿ: 202 ಕಡಿತಗೊಂಡಿದ್ದು, ಹೊಸ ದರ 2,728

ಕೋಲ್ಕತ್ತಾ: 209 ಇಳಿಕೆಯಾಗಿದ್ದು, ಹೊಸ ದರ ?2,872.50

ಬೆಂಗಳೂರು: 2,821

ಮುಂಬೈ: 2,691

# ರೈತರ ಸಾಲ ಸಂಪೂರ್ಣ ಮನ್ನಾ ಮಾಡಿ

## ಕಲ್ಯಾಣ ಕರ್ನಾಟಕವನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ: ಸಯ್ಯದ್ ನಜರುದ್ದೀನ್ ಖಾದ್ರಿ ಆಗ್ರಹ

ಧೈರ್ಯದ ದಾರಿ



**ರಾಯಚೂರು, ಆ.1:** ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಂಟಿಯಾಗಿ ರಾಷ್ಟ್ರೀಕೃತ ಬ್ಯಾಂಕ್, ಸಹಕಾರಿ ಬ್ಯಾಂಕ್ ಹಾಗೂ ಇತರೆ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಎಂದು ಸಾಮಾಜಿಕ ಹೋರಾಟಗಾರ ಸಯ್ಯದ್ ನಜಿರುದ್ದೀನ್ ಖಾದ್ರಿ ಆಗ್ರಹಿಸಿದರು.

ಈ ವರ್ಷ ಮಳೆ ಕೊರತೆ, ಬೆಳೆ ನಷ್ಟ, ಗೊಬ್ಬರ ಹಾಗೂ ಬೀಜಗಳ ಬೆಲೆ ಏರಿಕೆ, ಬೆಂಬಲ ಬೆಲೆಯ ಕೊರತೆ ಸೇರಿದಂತೆ ಹಲವು ಸಮಸ್ಯೆಗಳಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೋವಿಡ್ ನಂತರವೂ ರೈತರು ಆರ್ಥಿಕವಾಗಿ ಚೇತರಿಸಿಕೊಳ್ಳದಿರುವ ಕಾರಣ ಸಾಲದ ಹೊರೆ ಹೆಚ್ಚಾಗಿದ್ದು, ಆತ್ಮಹತ್ಯೆಯಂತಹ ದುಸ್ಥಿತಿಗೆ ತಲುಪುತ್ತಿದ್ದಾರೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಈವರೆಗೆ ಕೇವಲ 60 ಶೇಕಡಾ ಬಿತ್ತನೆ ಮಾತ್ರ ನಡೆದಿದ್ದು, ಮಳೆಯ ಕೊರತೆಯಿಂದ ಉಳಿದ 40 ಶೇಕಡಾ ಬಿತ್ತನೆ ಇನ್ನೂ ಆಗಿಲ್ಲ. ರೈತರಿಗೆ ಮುಂದಿನ ಬಿತ್ತನೆಗೆ ಅಗತ್ಯ ಬಂಡವಾಳ ಸಿಗಬೇಕಾದರೆ ಸರ್ಕಾರ ತಕ್ಷಣ ಸಾಲಮನ್ನಾ ಘೋಷಿಸಬೇಕು ಎಂದು ಒತ್ತಾಯಿಸಿದರು.

**ಬರಪೀಡಿತ ಪ್ರದೇಶ ಘೋಷಣೆಗೆ ಆಗ್ರಹ:** ಕಲ್ಯಾಣ ಕರ್ನಾಟಕದ ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಮಳೆ ಕೊರತೆಯಿಂದ ಬೆಳೆಗಳು ಹಾನಿಗೊಳಗಾಗಿದ್ದು, ಸರ್ಕಾರ ಈ ಏಳು ಜಿಲ್ಲೆಗಳನ್ನು ತಕ್ಷಣ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ಅವರು ಆಗ್ರಹಿಸಿದರು.

**ಪ್ರಮುಖ ಬೇಡಿಕೆಗಳು –ರಾಷ್ಟ್ರೀಕೃತ, ಸಹಕಾರಿ ಹಾಗೂ ಇತರೆ ಬ್ಯಾಂಕ್‌ಗಳ ಕೃಷಿ ಸಾಲ ಸಂಪೂರ್ಣ ಮನ್ನಾ.**

**–ಕಲ್ಯಾಣ ಕರ್ನಾಟಕದ ಎಲ್ಲಾ 7 ಜಿಲ್ಲೆಗಳನ್ನು ಬರಪೀಡಿತ ಪ್ರದೇಶವೆಂದು ಘೋಷಣೆ.**

**ಓಆಖಈ ಮಾರ್ಗಸೂಚಿಯಂತೆ ಪ್ರತಿ ಎಕರೆಗೆ ?50,000 ಪರಿಹಾರ.**

**–ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಉದ್ಯೋಗ ಖಾತ್ರಿ ಕಾಮಗಾರಿಗಳನ್ನು ಹೆಚ್ಚಿಸಬೇಕು.**

**–ವಿದ್ಯುತ್ ಬಿಲ್ ಹಾಗೂ ಕೃಷಿ ಸಾಲ ಮರುಪಾವತಿಗೆ ಅವಧಿ ವಿಸ್ತರಣೆ ನೀಡಬೇಕು.**

**"ರೈತ ಬದುಕಿದರೆ ದೇಶ ಬದುಕುತ್ತದೆ. ಸರ್ಕಾರ ಕೂಡಲೇ ಸ್ಪಂದಿಸಿ ರೈತರ ಸಂಕಷ್ಟ ನಿವಾರಣೆಗೆ ತುರ್ತು ಕ್ರಮ ಕೈಗೊಳ್ಳಬೇಕು."**

**– ಸಯ್ಯದ್ ನಜರುದ್ದೀನ್ ಖಾದ್ರಿ**

# ವ್ಯಸನಿಗಳಾದರೆ ಕುಟುಂಬ ಹಾಳು; ವಿದ್ಯಾರ್ಥಿಗಳು ಜಾಗೃತರಾಗಬೇಕು: ಅಶೋಕ ಪವಾರ್

## ಡಾ. ವಿಜಯ ಮಹಾಂತಪ್ಪ ಶ್ರೀಗಳ ಸ್ಮರಣೆಯಲ್ಲಿ ವ್ಯಸನಮುಕ್ತ ದಿನಾಚರಣೆ

ಧೈರ್ಯದ ದಾರಿ



**ಸಿರವಾರ, ಆ.1:** ಲಿಂಗೈಕ್ಯ ಡಾ. ವಿಜಯ ಮಹಾಂತಪ್ಪ ಶ್ರೀಗಳ ಜನ್ಮದಿನದ ಅಂಗವಾಗಿ ತಾಲೂಕು ಆಡಳಿತದ ವತಿಯಿಂದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ವ್ಯಸನಮುಕ್ತ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ತಹಶೀಲ್ದಾರ್ ಅಶೋಕ ಪವಾರ್, ಯುವಕರು ದೇಶದ ಆಸ್ತಿ ಹಾಗೂ ನಾಡಿನ ಭವಿಷ್ಯವಾಗಿದ್ದು, ಅವರು ವ್ಯಸನಗಳಿಗೆ ಬಲಿಯಾದರೆ ದೇಶದ ಅಭಿವೃದ್ಧಿಯ ಮೇಲೆಯೇ ದುಷ್ಪರಿಣಾಮ 2ನೇಪುಟಕ್ಕೆ

# ಪೂಜ್ಯ ಡಾ. ಮಹಾಂತ್ ಶಿವಯೋಗಿ ಸ್ವಾಮೀಜಿ ಜನ್ಮದಿನ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ



ಧೈರ್ಯದ ದಾರಿ



**ಮಾನ್ವಿ, ಆ.1:** ತಾಲೂಕು ಆಡಳಿತ ಕಾರ್ಯಾಲಯ ಮಾನ್ವಿ ಹಾಗೂ ಸರ್ವೋದಯ ಸಮೂಹ ಶಿಕ್ಷಣ ಸಂಸ್ಥೆ, ಮಾನ್ವಿ ಇವರ ಸಂಯುಕ್ತ ಆಶ್ರಯದಲ್ಲಿ ಪೂಜ್ಯ ಶ್ರೀ ಶ್ರೀ ಶ್ರೀ ಮ.ನಿ.ಪ್ರ ಡಾ. ಮಹಾಂತ್ ಶಿವಯೋಗಿ ಸ್ವಾಮೀಜಿ ಅವರ ಜನ್ಮದಿನದ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಶನಿವಾರ ಸರ್ವೋದಯ ಸಮೂಹ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಮಾನ್ಯ ತಹಶೀಲ್ದಾರರು ಹಾಗೂ ತಾಲೂಕು ದಂಡಾಧಿಕಾರಿಗಳಾದ ಶ್ರೀ ಭೀಮರಾಯ ರಾಮಸಮುದ್ರ ಉದ್ಘಾಟಿಸಿ, ವ್ಯಸನದಿಂದ ವ್ಯಕ್ತಿ, ಕುಟುಂಬ ಹಾಗೂ ಸಮಾಜದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಮಾತನಾಡಿದರು. ಯುವಜನತೆ ವ್ಯಸನಗಳಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾ ಫ್ರೆಂಡ್ಸ್ ಮಾನ್ವಿ ಸಂಸ್ಥಾಪಕರು ಹಾಗೂ ಸರ್ವೋದಯ ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಪುರಸಭೆಯ ಮುಖ್ಯ ಅಧಿಕಾರಿಗಳಾದ ಶ್ರೀ ಪರಶುರಾಮ್ ದೇವಮಾನೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಪ್ರಭಾರ ಮುಖ್ಯ ವೈದ್ಯಾಧಿಕಾರಿಗಳಾದ ಡಾ. ಶರಣಪ್ಪ ಡಿ, ತಾಲೂಕು ಪಂಚಾಯತ್ ವ್ಯವಸ್ಥಾಪಕರಾದ ಶ್ರೀ ಬಸವರಾಜ್, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀ ಚಂದ್ರಶೇಖರ್ ದೊಡ್ಮನಿ, ಅಗ್ನಿಶಾಮಕ ಇಲಾಖೆಯ ಶ್ರೀ ರಂಗಪ್ಪ, ಮಾನ್ವಿ ಪೊಲೀಸ್ ಠಾಣೆಯ ಪಿಎಸ್‌ಐ ಶ್ರೀ ಶರಣಪ್ಪ ಹಾಗೂ ತೋಟಗಾರಿಕೆ ಇಲಾಖೆಯ ಶ್ರೀ ಹನುಮಂತ ಭಜಂತ್ರಿ ಭಾಗವಹಿಸಿ ವ್ಯಸನಮುಕ್ತ ಜೀವನದ ಮಹತ್ವ ಕುರಿತು ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಜಾಗೃತಿ ಸಂದೇಶ ನೀಡಿದರು.

ಅತಿಥಿಗಳಾಗಿ ಸರ್ವೋದಯ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜಿನ ಪ್ರಾಚಾರ್ಯ ಶ್ರೀ ಶಿವಕುಮಾರ್, ಸರ್ವೋದಯ ಫಾರ್ಮಸಿ ಕಾಲೇಜಿನ ಪ್ರಾಚಾರ್ಯ ಶ್ರೀ ನವೀನ್ ಕುಮಾರ್ ಹಾಗೂ ಸರ್ವೋದಯ ಸಿಬಿಎಸ್‌ಇ ಶಾಲೆಯ ಪ್ರಾಚಾರ್ಯ ಶ್ರೀ ಜೋಶಫ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಉಪನ್ಯಾಸಕರು, ಶಿಕ್ಷಕರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸುವ ಪ್ರತಿಜ್ಞೆ ಸ್ವೀಕರಿಸಿದರು.

ಮೊದಲನೇ ಪುಟದಿಂದ

# ಪರೀಕ್ಷಾ ಅಕ್ರಮ ತಡೆಗೆ ಬಿಗಿ ಕ್ರಮ : ಗೃಹ ಸಚಿವ ಪ್ರಿಯಾಂಕ್ ಖರ್ಗೆ

ಮೊಬೈಲ್ ಫೋನ್ ಬಳಸಲು ಅವಕಾಶ ಇರುವುದಿಲ್ಲ. ಸಾಮಾಜಿಕ ಜಾಲತಾಣಗಳ ಮೇಲೆ ನಿರಂತರ ನಿಗಾ ಇರಿಸಲಾಗುತ್ತಿದ್ದು, ವದಂತಿಗಳು ಹಾಗೂ ಸುಳ್ಳು ಸುದ್ದಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ವಿಶೇಷ ನಿಗಾ:**ಈ ಹಿಂದೆ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳು ಹಾಗೂ ಕೆಲವು ಕೋಚಿಂಗ್ ಕೇಂದ್ರಗಳ ಮೇಲೂ ವಿಶೇಷ ನಿಗಾ ಇರಿಸಲಾಗಿದೆ. ಯಾವುದೇ ಕೋಚಿಂಗ್ ಕೇಂದ್ರಗಳಿಗೆ ಅನುಮಾನ ಅಥವಾ ವದ್ಧಂತಿ ಕಂಡು ಬಂದರೆ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಪರೀಕ್ಷಾ ಕೇಂದ್ರಗಳಲ್ಲಿ ಪ್ರಶ್ನೆ ಪತ್ರಿಕೆ ಕೊರತೆ ಅಥವಾ ವಿತರಣೆಯಲ್ಲಿ ವಿಳಂಬ ಉಂಟಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ. ಗೈರುಹಾಜರಾದ ಅಭ್ಯರ್ಥಿಗಳ ಪ್ರಶ್ನೆ ಪತ್ರಿಕೆಗಳನ್ನೂ ಹೊರಗೆ ತೆಗೆದುಕೊಂಡು ಹೋಗುವಂತಿಲ್ಲ, ಬದಲಾಗಿ ಪರೀಕ್ಷಾ ಅಭ್ಯರ್ಥಿಯ ನಿಗದಿತ ಜಾಗದಲ್ಲೆ ಇಟ್ಟಿರಬೇಕು ಎಂದರು.ನಾಳೆ 3991 ಕಾನ್ಸ್‌ಟೇಬಲ್‌ಗಳ ನೇಮಕಾತಿಗೆ ಲಿಖಿತ ಪರೀಕ್ಷೆ ನಡೆಯಲಿದ್ದು, 3,70,850 ಲಕ್ಷ ಅರ್ಜಿಗಳಿವೆ. 36 ಸಾವಿರ ಹುದ್ದೆಗಳ ಪೈಕಿ ಕೆಪಿಎಸ್‌ಸಿಗೆ 906 ಹುದ್ದೆಗಳ ನೇಮಕಾತಿಗೆ ಮಾತ್ರ ಅವಕಾಶ ನೀಡಲಾಗಿದೆ ಎಂದು ವಿವರಿಸಿದರು.

# ವ್ಯಸನಿಗಳಾದರೆ ಕುಟುಂಬ ಹಾಳು; ವಿದ್ಯಾರ್ಥಿಗಳು ಜಾಗೃತರಾಗಬೇಕು: ಅಶೋಕ ಪವಾರ್

## ಡಾ. ವಿಜಯ ಮಹಾಂತಪ್ಪ ಶ್ರೀಗಳ ಸ್ಮರಣೆಯಲ್ಲಿ ವ್ಯಸನಮುಕ್ತ ದಿನಾಚರಣೆ

ಬೀರುತ್ತದೆ ಎಂದು ಹೇಳಿದರು.ಡಾ. ವಿಜಯ ಮಹಾಂತಪ್ಪ ಶ್ರೀಗಳು ವ್ಯಸನಿಗಳನ್ನು ದ್ವೇಷಿಸದೇ, ವ್ಯಸನವನ್ನೇ ದ್ವೇಷಿಸಬೇಕು ಎಂಬ ಸಂದೇಶವನ್ನು ಜೀವನದುದ್ದಕ್ಕೂ ಸಾರಿದರು. ಯುವಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಅನೇಕ ಶಿಬಿರಗಳು ಹಾಗೂ ಚಿಂತನ-ಮಂಥನ ಕಾರ್ಯಕ್ರಮಗಳನ್ನು ಆಯೋಜಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು ಎಂದು ತಿಳಿಸಿದರು.

ಮದ್ಯಪಾನ, ಗುಟ್ಕಾ, ತಂಬಾಕು ಹಾಗೂ ಮಾದಕ ವಸ್ತುಗಳ ವ್ಯಸನದಿಂದ ಒಂದು ಕುಟುಂಬವೇ ಆರ್ಥಿಕ ಹಾಗೂ ಸಾಮಾಜಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತದೆ. ಆದ್ದರಿಂದ ವಿದ್ಯಾರ್ಥಿಗಳು ಹಾಗೂ ಯುವಕರು ವ್ಯಸನಗಳಿಂದ ದೂರವಿದ್ದು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಜಿ ಚೌದ್ರಿ ಮಾತನಾಡಿ, ಶ್ರೀಗಳ ಸಮಾಜ ಸುಧಾರಣೆಯ ಕಾರ್ಯ ವ್ಯಸನಮುಕ್ತಿಗೆ ಮಾತ್ರ ಸೀಮಿತವಾಗಿರದೆ, ಮೂಢನಂಬಿಕೆ, ಕಂದಾಚಾರ ಹಾಗೂ ಜಾತಿ ವ್ಯವಸ್ಥೆಯ ವಿರುದ್ಧವೂ ನಿರಂತರ ಹೋರಾಟ ನಡೆಸಿದರು. ಶಿಕ್ಷಣದ ಮೂಲಕ ಸಮಾಜ ಪರಿವರ್ತನೆ ಸಾಧ್ಯ ಎಂಬ ನಂಬಿಕೆಯಿಂದ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಅಕ್ಷರ ದಾಸೋಹ ಹಾಗೂ ಜ್ಞಾನ ದಾಸೋಹಕ್ಕೆ ಆದ್ಯತೆ ನೀಡಿದರು ಎಂದು ಹೇಳಿದರು.

ಪಶು ವೈದ್ಯಾಧಿಕಾರಿ ರಾಜು ಕಾಂಬ್ಳೆ ವ್ಯಸನಗಳಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

# ವ್ಯಸನ ಮುಕ್ತ ಸಮಾಜ ಕಟ್ಟಲು ಪಣ ತೊಡಬೇಕು: ಡಾ.ಹಂಪಣ್ಣ ಸಜ್ಜನ್



ಧೈರ್ಯದ ದಾರಿ

**ರಾಯಚೂರು ಆಗಸ್ಟ್ 01:** ಮದ್ಯ ಹಾಗೂ ಮಾದಕ ವಸ್ತುಗಳ ಸೇವೆಯಿಂದ ಅನೇಕ ಕುಟುಂಬಗಳು ವಿವಿಧ ರೀತಿಯ ಸಮಸ್ಯೆಗಳು ಎದುರಿಸುತ್ತಿದ್ದು, ಎಲ್ಲರೂ ವ್ಯಸನ ಮುಕ್ತ ಸಮಾಜ ಕಟ್ಟಲು ಪಣ ತೊಡಬೇಕು ಎಂದು ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್ ಅವರು ಹೇಳಿದರು.

ಆಗಸ್ಟ್ 01ರ ಶನಿವಾರ ದಂದು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ರಾಯಚೂರು ಹಾಗೂ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು ಇವರ ಸಂಯುಕ್ತಾಶ್ರದಲ್ಲಿ ಡಾ.ಮಹಾಂತ ಶಿವಯೋಗಿ ಅವರ ಜನ್ಮದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದಲ್ಲಿ ಲಕ್ಷಾಂತರ ಜನರು ವಿವಿಧ ರೀತಿಯ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಕಾಲೇಜಿನ ಹಂತದಲ್ಲಿಯೇ ಮಾದಕ ವ್ಯಸನಕ್ಕೆ ಬಲಿಯಾದ ಯುವಕರು ಅದರಿಂದ ಹೊರಬರಲಾಗದೆ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ದೇಶದ ಭವಿಷ್ಯ ರೂಪಿಸಬೇಕಾದ ಯುವ ಸಮೂಹ ಮೋಜಿಗಾಗಿ ಮಾದಕ ವ್ಯಸನಿಗಳಾಗುತ್ತಿರುವುದು ವಿಷಾದನೀಯ ಎಂದರು.

ಪದವಿ ಕಾಲೇಜಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಿದ್ದು, ಅರ್ಥಪೂರ್ಣವಾಗಿದೆ. ಇಗಿನ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ದುಶ್ಚಟಗಳಿಗೆ ಬಲಿಯಾಗಿ ತಮ್ಮ ಉತ್ತಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ತಂದೆ, ತಾಯಿಯರ ಆಸೆಗಳನ್ನು ಈಡೇರಿಸಲು ವಿಫಲವಾಗುತ್ತಾರೆ. ಮಹಾಂತ್ ಶಿವಯೋಗಿಗಳು ಮಹಾಂತ್ ಜೋಳಿಗೆಯನ್ನು ಸ್ಥಾಪಿಸಿ. ಸಮಾಜದಲ್ಲಿ ಆನೇಕ ಕುಟುಂಬಗಳನ್ನು ದುಶ್ಚಟಗಳಿಂದ ಹೊರತಂದರು. ಅವರು ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಾಮಾಜಿಕ ಕಾರ್ಯಗಳನ್ನು ಮಾಡಿದ್ದಾರೆ ಎಂದರು.

ಡ್ರಗ್ಸ್ ಮುಕ್ತ ರಾಜ್ಯಕ್ಕಾಗಿ ಆಪರೇಷನ್ ರೈಸಿ ಈಗಾಗಲೇ ಸರ್ಕಾರದಿಂದ ಪ್ರಾರಂಭವಾಗಿದೆ. ಸಾರ್ವಜನಿಕರಿಗೆ ಡ್ರಗ್ಸ್ ಕುರಿತು ಮಾಹಿತಿ ಸಿಕ್ಕಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡುವ ಮೂಲಕ ಡ್ರಗ್ಸ್ ಮುಕ್ತ ಕರ್ನಾಟಕಕ್ಕೆ ಎಲ್ಲರೂ ಸಹಕರಿಸಬೇಕು. ಅಲ್ಲದೆ ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದೆ ಅತ್ಯಂತ ಶ್ರದ್ಧೆಯಿಂದ ಚೆನ್ನಾಗಿ ಓದಿ ಉನ್ನತ ಮಟ್ಟದ ಅಧಿಕಾರಿಗಳಾಗಿ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನಂತರ ಉಪನ್ಯಾಸಕರಾಗಿ ಮನೋ ವೈದ್ಯರಾದ ಡಾ.ವಿ.ಎ.ಮಾಲಿ ಪಾಟೀಲ್ ಅವರು ಮಾತನಾಡಿ, ಡಾ.ಮಹಾಂತ ಶಿವಯೋಗಿಗಳ ಜನ್ಮದಿನವು ಬಹಳಷ್ಟು ಮಹತ್ವ ಪೂರ್ಣವಾಗಿದ್ದು, ಜೀವನದಲ್ಲಿ ಅವರು ಮಹಾಂತ ಜೋಳಿಗೆ ದುಶ್ಚಟಗಳ ಭಿಕ್ಷೆ ಎನ್ನುವಂತೆ ಪ್ರತಿಯೊಬ್ಬರೂ ಇವರ ರೀತಿಯ ಜೀವನವನ್ನು ನಡೆಸಿದರೆ ಯುವಜನತೆಯು ವ್ಯಸನಗಳಿಂದ ಮುಕ್ತರಾಗಿ ಒಳ್ಳೆಯ ಜೀವನವನ್ನು ನಡೆಸಲು ಅನುಕೂಲವಾಗುತ್ತದೆ ಎಂದರು.

ಇದಕ್ಕೂ ಮುಂಚೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ ಜಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮದ್ಯಪಾನ, ಗುಟ್ಕಾ, ತಂಬಾಕು, ಮಾದಕ ದ್ರವ್ಯಗಳು ಇಂದು ಹಳ್ಳಿ ಹಳ್ಳಿಗಳಿಗೂ ನುಗ್ಗಿವೆ. ಯುವಕರು ಅವಕ್ಕೆ ದಾಸರಾಗಿ ದಾರಿ ತಪ್ಪುತ್ತಿದ್ದಾರೆ. ಒಂದು ಕುಟುಂಬದ ಒಬ್ಬ ವ್ಯಕ್ತಿ ವ್ಯಸನಿಯಾದರೆ ಆ ಇಡೀ ಕುಟುಂಬವೇ ನಾಶವಾಗುತ್ತದೆ. ಆರ್ಥಿಕವಾಗಿ ದಿವಾಳಿಯಾಗುತ್ತದೆ, ಸಾಮಾಜಿಕವಾಗಿ ಅವಮಾನಕ್ಕೆ ಒಳಗಾಗುತ್ತದೆ. ಈ ಸತ್ಯವನ್ನು ಶ್ರೀಗಳು ಅರಿತು ವ್ಯಸನಮುಕ್ತ ಸಮಾಜಕ್ಕಾಗಿ ಶ್ರಮಿಸಿದ್ದರು. ಅವರು ತಮ್ಮ ಇಡೀ ಬದುಕನ್ನು ವ್ಯಸನಮುಕ್ತ ಸಮಾಜದ ನಿರ್ಮಾಣಕ್ಕೆ ಮುಡಿಪಾಗಿಟ್ಟರು ಎಂದರು.

ಶ್ರೀಗಳು ಹಗಲು ಇರಳು ಎನ್ನದೆ ಹಳ್ಳಿ ಹಳ್ಳಿಗಳಿಗೆ ತೆರಳಿ ವ್ಯಸನ ಮುಕ್ತ ಕುರಿತು ಜಾಗೃತಿ ಮೂಡಿಸುತ್ತಿದ್ದರು.

ಯುವಕರು ಈ ದೇಶದ ಆಸ್ತಿ, ಈ ನಾಡಿನ ಭವಿಷ್ಯ. ಯುವಕರು ಹಾಳಾದರೆ ದೇಶವೇ ಹಾಳಾಗುತ್ತದೆ ಎಂಬ ಕಳಕಳಿ ಅವರ ಮಾತಿನಲ್ಲಿ ಇರುತ್ತಿತ್ತು. ಇದಕ್ಕಾಗಿ ಅವರು ಅನೇಕ ಶಿಬಿರಗಳನ್ನು, ಚಿಂತನ ಮಂಥನ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದರು. ವ್ಯಸನಕ್ಕೆ ಬಿದ್ದ ಯುವಕರನ್ನು ಕರೆತಂದು, ಅವರೊಂದಿಗೆ ಆಪ್ತ ಸಮಾಲೋಚನೆ ಮಾಡಿ, ಅವರಿಗೆ ಯೋಗ, ಧ್ಯಾನ, ಕಾಯಕದ ಮಹತ್ವವನ್ನು ತಿಳಿಸಿ ಮತ್ತೆ ಸರಿದಾರಿಗೆ ತರುವ ಕೆಲಸವನ್ನು ಅವರು ಮಾಡಿದ್ದರು. ಅದರಿಂದಾಗಿ ಸಾವಿರಾರು ಕುಟುಂಬಗಳು ಮತ್ತೆ ಬೆಳಕು ಕಂಡಿವೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಪ್ರೊ.ಯಂಕಣ್ಣ. ಸಂಯೋಜನಾಧಿಕಾರಿ ಡಾ.ಮಹಾತೇಶ್ ಅಂಗಡಿ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಇದ್ದರು.

ಉಪನ್ಯಾಸಕರಾದ ಶಿವರಾಜ ಕೊಪ್ಪರ ಸ್ವಾಗತಿಸಿದರು. ವಂದನೆಯನ್ನು ಉಪನ್ಯಾಸಕರಾದ ಸುಭಾಷ್ ಚಂದ್ರ ಪಾಟೀಲ್ ಹಾಗೂ ನಿರೂಪಣೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾರ್ಯದರ್ಶಿ ಡಾ.ದಂಡಪ್ಪ ಬಿರಾದಾರ್ ಅವರು ಮಾಡಿದರು.

# ಸ್ನೇಹ ಎಂಬುದು ರಕ್ತದ ಸಂಬಂಧವಲ್ಲ, ಅದು ಹೃದಯದ ಬಂಧನ

ಆಗಸ್ಟ್ 2 ಎಲ್ಲರಿಗೂ ಸ್ನೇಹಿತರ ದಿನದ ಹಾರ್ದಿಕ ಶುಭಾಶಯಗಳು.
ಹಿಂದಿನ ಆಗಸ್ಟ್ ತಿಂಗಳು ಎಷ್ಟು ಚೆನ್ನಾಗಿತ್ತು ಅಲ್ವಾ
ಆಗ ನಾವು ಮಕ್ಕಳಾಗಿದ್ದೆವು. ಒಂದು ರೂಪಾಯಿಗೆ ಸಿಗುವ ಫ್ರೆಂಡ್‌ಶಿಪ್ ಬೆಲ್ಟ್ ಅಥವಾ ಬಣ್ಣದ ದಾರ ತಂದು, ನಮ್ಮ ಪ್ರತಿಯೊಬ್ಬ ಸ್ನೇಹಿತನ ಕೈಗೆ ಕಟ್ಟಿ ಸಂತೋಷದಿಂದ ಸ್ನೇಹಿತರ ದಿನವನ್ನು ಆಚರಿಸುತ್ತಿದ್ದೆವು.

ಅಲ್ಲಿ ದುಬಾರಿ ಉಡುಗೊರೆಗಳಿರಲಿಲ್ಲ
ಸೋಶಿಯಲ್ ಮೀಡಿಯಾ ಪೋಸ್ಟ್‌ಗಳಿರಲಿಲ್ಲ
ಇದ್ದದ್ದು ಮಾತ್ರ ನಿಷ್ಕಪಟ ಸ್ನೇಹ, ನಗು ಮತ್ತು ಮನಸಿನ ಪ್ರೀತಿ.
ಇಂದು ಆ ದಿನಗಳು ಬದಲಾಗಿವೆ
ಬೆಲ್ಟ್‌ಗಳ ಜಾಗವನ್ನು ಮೊಬೈಲ್ ಸಂದೇಶಗಳು ತೆಗೆದುಕೊಂಡಿವೆ.
ಆದರೆ ಆ ಬಾಲ್ಯದ ನೆನಪುಗಳು ಮಾತ್ರ ಎಂದೆಂದಿಗೂ ಅಮೂಲ್ಯ.

ಕೆಲವು ಕ್ಷಣಗಳು ಮತ್ತೆ ಮರಳಿ ಬರುವುದಿಲ್ಲ ಅವು ನೆನಪುಗಳಾಗಿ ನಮ್ಮ ಹೃದಯದಲ್ಲೇ ಶಾಶ್ವತವಾಗಿ ಉಳಿದುಬಿಡುತ್ತವೆ.
ಇಂದು ನನ್ನ ಜೀವನದ ಕೆಲವು ಅನುಭವಗಳನ್ನು ನಿಮ್ಮೊಂದಿಗೆ ಹಂಚಿಕೊಳ್ಳಲು ಬಯಸುತ್ತೇನೆ.
ಸ್ನೇಹ ಎಂದಾಕ್ಷಣ ನಮ್ಮ ಮನಸ್ಸಿಗೆ ಮೊದಲು ನೆನಪಾಗುವುದು ನಮ್ಮ ಸೀಕ್ರೆಟ್‌ಗಳನ್ನು ಕಾಪಾಡುವ ಆಪ್ತ ಸ್ನೇಹಿತ. ಪ್ರತಿಯೊಬ್ಬರ ಜೀವನದಲ್ಲೂ ಒಬ್ಬ ಪ್ರಾಣ ಸ್ನೇಹಿತ ಅಥವಾ ಪ್ರಾಣ ಗೆಳತಿ ಇರುತ್ತಾರೆ. ನಮ್ಮ ಎಲ್ಲಾ ತುಂಟಾಟಗಳು, ಸಂತೋಷಗಳು, ಕಷ್ಟಗಳು ಅವರಿಗೆ ಮಾತ್ರ ಸಂಪೂರ್ಣವಾಗಿ ತಿಳಿದಿರುತ್ತವೆ.
ಸ್ನೇಹಿತರಿಗೆ ನಾವು ಕುಟುಂಬದ ಸದಸ್ಯರಷ್ಟೇ ಸ್ಥಾನ ನೀಡಿರುತ್ತೇವೆ. ನಮಗೆ ಏನೇ ಸಮಸ್ಯೆ ಬಂದರೂ ನಮ್ಮ ಜೊತೆಗೆ ನಿಂತು, ಹೆಗಲು ನೀಡಿ, ಧೈರ್ಯ ತುಂಬುವವರೇ ನಿಜವಾದ ಸ್ನೇಹಿತರು. ಆದರೆ ನನ್ನ ಜೀವನದಲ್ಲಿ ಅಂತಹ ಒಬ್ಬ ನಿಜವಾದ ಗೆಳತಿ ಸಿಗಲಿಲ್ಲ ಎಂಬ ಕೊರತೆ ಇಂದಿಗೂ ಇದೆ.

ನಿಜವಾದ ಸ್ನೇಹ ಎಂದರೆ ನಮ್ಮ ತಪ್ಪುಗಳನ್ನು ಎಲ್ಲರ ಮುಂದೆ ಹೇಳಿ ಅವಮಾನಿಸುವುದಲ್ಲ; ಏಕಾಂತದಲ್ಲಿ ತಿದ್ದಿ, ಸರಿ-ತಪ್ಪುಗಳನ್ನು ತಿಳಿಸಿ, ಯಾವುದೇ ಸಂದರ್ಭದಲ್ಲೂ ಕೈ ಬಿಡದೆ ಜೊತೆಯಾಗಿ ನಡೆಯುವುದೇ ನಿಜವಾದ ಸ್ನೇಹ. ಅಂತಹ ಸ್ನೇಹಿತರು ನಿಮ್ಮ ಜೀವನದಲ್ಲಿದ್ದರೆ ನೀವು ನಿಜವಾಗಿಯೂ ಭಾಗ್ಯವಂತರು.
ನಮ್ಮ ಸಂತೋಷದಲ್ಲಿ ಹಲವರು ಪಾಲುದಾರರಾಗುತ್ತಾರೆ. ಆದರೆ ನಮ್ಮ ದುಃಖದ ಸಮಯದಲ್ಲಿ ನಮ್ಮ ಜೊತೆ ನಿಂತು ಧೈರ್ಯ ತುಂಬುವವರೇ ನಿಜವಾದ ಸ್ನೇಹಿತರು.

ಸ್ನೇಹಿತರ ನಡುವೆ ಯಾವುದೇ ಮುಚ್ಚುಮರೆ ಇರಬಾರದು. ಯಾವುದೇ ವಿಷಯವಾದರೂ ಪರಸ್ಪರ ಮುಕ್ತವಾಗಿ ಹಂಚಿಕೊಂಡಾಗ ಮಾತ್ರ ಸ್ನೇಹಕ್ಕೆ ನಿಜವಾದ ಅರ್ಥ ಸಿಗುತ್ತದೆ. ಮನೆಯಲ್ಲಿ ಹೇಳಿಕೊಳ್ಳಲಾಗದ ಅನೇಕ ವಿಷಯಗಳನ್ನು ನಾವು ಸ್ನೇಹಿತರ ಮುಂದೆ ಹೇಳಿ ಮನಸ್ಸು ಹಗುರ ಮಾಡಿಕೊಳ್ಳುತ್ತೇವೆ. ಆದರೆ ಬೆನ್ನಿಗೆ ಚೂರಿ ಹಾಕುವ ಸ್ನೇಹಿತರೂ ಇರುತ್ತಾರೆ. ಆದ್ದರಿಂದ ಸ್ನೇಹವನ್ನು ಆರಿಸಿಕೊಳ್ಳುವಾಗ ಎಚ್ಚರ ಅಗತ್ಯ.
ಇಂದಿನ ಕಾಲದಲ್ಲಿ ಯಾರನ್ನು ನಂಬಬೇಕು, ಯಾರನ್ನು ನಂಬಬಾರದು ಎಂಬುದೇ ತಿಳಿಯದ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲವರು ಹೊಸ ಸ್ನೇಹಿತರು ಸಿಕ್ಕ ತಕ್ಷಣ ಹಳೆಯ ಸ್ನೇಹಿತರನ್ನು ಮರೆತುಬಿಡುತ್ತಾರೆ. ಆದರೆ ನಿಜವಾದ ಸ್ನೇಹ ಎಂದಿಗೂ ಬದಲಾಗುವುದಿಲ್ಲ.

ಸ್ನೇಹ ಎಂದರೆ ಸುಂದರ ಭಾವನೆ.
ಸ್ನೇಹಕ್ಕೆ ಭಾಷೆಯಿಲ್ಲ... ಭಾವನೆಗಳೇ ಅದರ ಪರಿಚಯ.
ಸ್ನೇಹಿತರು ಬದಲಾದರೂ, ಅವರೊಂದಿಗೆ ಕಳೆದ ನೆನಪುಗಳು ಮಾತ್ರ ಶಾಶ್ವತವಾಗಿ ಉಳಿಯುತ್ತವೆ.
ನಿಜವಾದ ಸ್ನೇಹ ಎಂದರೆ ನಿಮ್ಮ ಬೆಳವಣಿಗೆಯನ್ನು ನೋಡಿ ಅಸೂಯೆಪಡುವುದಲ್ಲ, ಮನಸಾರೆ ಸಂತೋಷಪಡುವುದು.
ನಿಮ್ಮ ಏಳಿಗೆಗೆ ಸದಾ ಪ್ರೋತ್ಸಾಹ ನೀಡುತ್ತಾ, ನಿಮ್ಮ ಕನಸುಗಳಿಗೆ ಬೆನ್ನೆಲುಬಾಗಿ ನಿಲ್ಲುವವರು ನಿಜವಾದ ಸ್ನೇಹಿತರು.
ಸುಖದಲ್ಲೂ, ದುಃಖದಲ್ಲೂ ನಿಮ್ಮ ಜೊತೆ ಹೆಜ್ಜೆ ಹಾಕುತ್ತಾ, ಯಾವುದೇ ರೀತಿಯ ಕೆಡುಕನ್ನು ಬಯಸದ, ನಿಮ್ಮ ಒಳಿತನ್ನೇ ಹಾರೈಸುವ ಹೃದಯವೇ ನಿಜವಾದ ಸ್ನೇಹ.
ನಿಜವಾದ ಸ್ನೇಹಿತರು ನಿಮ್ಮ ಯಶಸ್ಸನ್ನು ತಮ್ಮ ಯಶಸ್ಸಿನಂತೆ ಸಂಭ್ರಮಿಸುತ್ತಾರೆ.

ಕೊನೆಯ ಮಾತು...
"ಸ್ನೇಹಿತರನ್ನು ಸಂಪಾದಿಸುವುದು ದೊಡ್ಡ ವಿಷಯವಲ್ಲ... ಸಂಪಾದಿಸಿದ ಸ್ನೇಹವನ್ನು ಜೀವನಪೂರ್ತಿ ಕಾಪಾಡಿಕೊಳ್ಳುವುದೇ ನಿಜವಾದ ಗೆಲುವು.
ನಿಮ್ಮ ಜೀವನದಲ್ಲಿರುವ ನಿಜವಾದ ಸ್ನೇಹಿತರನ್ನು ಗೌರವಿಸಿ, ಪ್ರೀತಿಸಿ, ಕಳೆದುಕೊಳ್ಳಬೇಡಿ... ಏಕೆಂದರೆ ಹಣದಿಂದ ಎಲ್ಲವನ್ನೂ ಖರೀದಿಸಬಹುದು, ಆದರೆ ನಿಜವಾದ ಸ್ನೇಹವನ್ನು ಎಂದಿಗೂ ಖರೀದಿಸಲಾಗುವುದಿಲ್ಲ.



ಮತ್ತೊಮ್ಮೆ ಎಲ್ಲರಿಗೂ ಸ್ನೇಹಿತರ ದಿನದ ಹಾರ್ದಿಕ ಶುಭಾಶಯಗಳು.

-Ganga's ಬರಹಗಳು

# ಸೊಳ್ಳೆ ಉತ್ಪತಿ ತಾಣಗಳ ನಿಯಂತ್ರಣಕ್ಕೆ ಸಾರ್ವಜನಿಕರು ಸಹಕರಿಸಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ಧೈರ್ಯದ ದಾರಿ



**ರಾಯಚೂರು ಆಗಸ್ಟ್ 01 :** ಮಾನ್ಸೂನ್ ಮಳೆಯು ಅರಂಭದ ಹಿನ್ನಲೆ ಮನೆಯ ಸುತ್ತಲೂ ಹಾಗೂ ಅನಗತ್ಯ ನೀರು ನಿಲ್ಲುವ ಸ್ಥಳಗಳಲ್ಲಿ ಸೊಳ್ಳೆ ಉತ್ಪತ್ತಿಯಾಗುವುದನ್ನು ತಡೆಗಟ್ಟುವ ಕುರಿತು ಸಾರ್ವಜನಿಕರ ಸಹಕಾರ ಹಾಗೂ ನಿಯಮಿತವಾಗಿ ನಿಗಾವಣೆ ವಹಿಸುವ ಜೊತೆಗೆ ಕರ್ನಾಟಕ ಸರ್ಕಾರ ಮಾರ್ಗಸೂಚಿ ಅನ್ವಯ ವಾಣಿಜ್ಯ ಹಾಗೂ ಕಟ್ಟಡ ಕಾಮಗಾರಿ ಸ್ಥಳಗಳಲ್ಲಿ ಸೊಳ್ಳೆ ಉತ್ಪತ್ತಿ ಕಂಡುಬಂದಲ್ಲಿ ದಂಡ ವಿಧಿಸಲು ಅಗತ್ಯ ಕ್ರಮ ವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಜುಲೈ 31ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಸೊಳ್ಳೆಗಳಿಂದ ಹರಡುವ ರೋಗಗಳ ನಿಯಂತ್ರಣ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈಗಾಗಲೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು ರಾಜ್ಯ ಸರಕಾರದ ಮಾರ್ಗಸೂಚಿಯನ್ವಯ ಹಾಗೂ ಆಯುಕ್ತರ ನಿರ್ದೇಶನದಂತೆ ಸೊಳ್ಳೆ ಕಚ್ಚುವಿಕೆಯಿಂದ ಹರಡುವ ಶಂಕಿತ ಡೆಂಗ್ಯೂ ಪ್ರಕರಣದ ಮಾಹಿತಿ ದೊರೆತಾಗ ತಕ್ಷಣವೇ ಸಂಬಂಧಿಸಿದ ಸ್ಥಳೀಯ ಸಂಸ್ಥೆಗಳು ಫಾಗಿಂಗ್ ಕೈಗೊಳ್ಳಲು ಹಾಗೂ ನೀರು ಸರಬರಾಜು ಪೈಪ ಸೋರಿಕೆಯನ್ನು ತಕ್ಷಣ ತಡೆಗಟ್ಟಲು ಮತ್ತು ಓವರ ಹೆಡ್ ಹಾಗೂ ಅಂಡರ ಗ್ರೌಂಡ ಟ್ಯಾಂಕಗಳಿಗೆ ಮುಚ್ಚಳ ಮುಚ್ಚಲು, ಚರಂಡಿ ಸ್ವಚ್ಛಗೊಳಿಸಲು ಅಗತ್ಯ ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು,

ಜನರಿಗೆ ನಿರಂತರ ಜಾಗೃತಿಗಾಗಿ ಪ್ರತಿ ದಿನ ತ್ಯಾಜ ವಿಲೇವಾರಿ ವಾಹನಗಳ ಮೂಲಕ ಆಡಿಯೋ ಜಿಂಗಲ್ಸ್ ಬಿತ್ತರಿಸಬೇಕು. ಶಿಕ್ಷಣ ಇಲಾಖೆ ಶಾಲಾ ಆವರಣದಲ್ಲಿ ನೀರು ನಿಲ್ಲುವ ಸ್ಥಳಗಳನ್ನು ಗುರುತಿಸಿ ಸ್ವಚ್ಛಗೊಳಿಸುವ ಜೊತೆಗೆ ಲಾರ್ವಾ ಮುಕ್ತ ಶಾಲೆ ಎಂದು ಘೋಷಿಸಿಕೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆಯವರು ಅಂಗನವಾಡಿಗಳ ಒಳ ಮತ್ತು ಹೊರಗೆ ಲಾರ್ವಾ ಉತ್ಪತ್ತಿಯಾಗದಂತೆ ನಿಗಾವಹಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಾರಿಗೆ ಇಲಾಖೆಯ ಡಿಪೊಗಳಲ್ಲಿ ನಿರುಪಯುಕ್ತ ಟೈರುಗಳಲ್ಲಿ ಮಳೆ ನೀರು ನಿಲ್ಲದಂತೆ ನಿಗಾವಹಿಸಲು, ನೀರಾವರಿ ಇಲಾಖೆಯವರು ಕಾಲುವೆಗಳ ಹತ್ತಿರ ಬಸಿನೀರು ನಿಲ್ಲದಂತೆ ಕ್ರಮವಹಿಸಬೇಕು. ಬಹುದಿನಗಳ ವರೆಗೆ ನೀರು ನಿಲ್ಲುವ ಸ್ಥಳಗಳಲ್ಲಿ ಸೊಳ್ಳೆ ಉತ್ಪತ್ತಿ ತಡೆಯಲು ಲಾರ್ವಾಹಾರಿ ಗಪ್ಪಿ ಮತ್ತು ಗ್ಯಾಂಬ್ಯೂಸಿಯಾ ಮೀನುಗಳನ್ನು ಮೀನುಗಾರಿಕೆ ಇಲಾಖೆಯವರು ಸಾಕಾಣಿಕೆ ಮಾಡಿ ಅಗತ್ಯವಿರುವ ಸಂದರ್ಭಗಳಲ್ಲಿ ಆರೋಗ್ಯ ಇಲಾಖೆಗೆ ಒದಗಿಸಲು ಸೂಚಿಸಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ನಂದಿತಾ ಎಂ.ಎನ್. ಅವರು ಮಾತನಾಡಿ, ಜಿಲ್ಲೆಯಲ್ಲಿ ಆನೇಕಾಲು ರೋಗದ ಹೊಸ ಪ್ರಕರಣಗಳು ಶೂನ್ಯವಿದ್ದು, ಆದರೂ ಮುಂಜಾಗ್ರತ ಕ್ರಮವಾಗಿ ಆಯ್ದ ಗ್ರಾಮಗಳು, ವಲಸೆ ಪ್ರದೇಶಗಳಲ್ಲಿ ರಾತ್ರಿ ವೇಳೆ ರಕ್ತಲೇಪನ ಕಾರ್ಯ ನಡೆಯುತ್ತಿದೆ. ಲಿಂಗಸ್ಗೂರು ತಾಲೂಕಿನ ಕೃಷ್ಣಾ ನದಿ ನಡುಗಡ್ಡೆ ಹಳ್ಳಿಗಳಲ್ಲಿ ಮಲೇರಿಯಾ ಪ್ರಕರಣಗಳು ವರದಿಯಾಗುತ್ತಿದ್ದು, ಮನೆ ಒಳಗಡೆ ಕೀಟನಾಶಕ ಸಿಂಪರಣೆ, ಸೊಳ್ಳೆ ಪರದೆ ವಿತರಣೆ ಹಾಗೂ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಚಂದ್ರಶೇಖರಯ್ಯ ಸೊಳ್ಳೆಗಳಿಂದ ಹರಡುವ ರೋಗಗಳ ಸಮಗ್ರ ಮಾಹಿತಿಯನ್ನು ಸಭೆಗೆ ನೀಡಿದರು.

ಸೊಳ್ಳೆಯ ಉತ್ಪತ್ತಿ ತಾಣ ಕಂಡು ಬಂದರೆ ದಂಡ: ಸೊಳ್ಳೆ ಉತ್ಪತ್ತಿ ತಡೆಯಲು ಕರ್ನಾಟಕ ಸರಕಾರವು ಜಾಗೃತಿಯ ಜೊತೆಜೊತೆಗೆ ನಿರ್ಲಕ್ಷ್ಯ ವಹಿಸುವುದನ್ನು ತಡೆಯಲು ದಂಡ ವಿಧಿಸಲು ಸೂಚಿಸಿದೆ. ಮನೆಗಳಿಗೆ ಗ್ರಾಮೀಣ ಭಾಗದಲ್ಲಿ 400 ರೂ., ನಗರ ಪ್ರದೇಶಗಳಲ್ಲಿ 800 ರೂ., ವಾಣಿಜ್ಯ ಮಳಿಗೆ ಗ್ರಾಮೀಣ ಭಾಗದಲ್ಲಿ 1000 ರೂ., ನಗರ ಪ್ರದೇಶಗಳಲ್ಲಿ 2000 ರೂ., ಕಟ್ಟಡ ನಿರ್ಮಾಣ, ಗ್ರಾಮೀಣ ಭಾಗದಲ್ಲಿ 2000 ರೂ., ನಗರ ಪ್ರದೇಶಗಳಲ್ಲಿ 4000 ರೂ. ದಂಡ ವಿಧಿಸಬಹುದಾಗಿದೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಹಾಲ ಸಿದ್ದಪ್ಪ ಪೂಜಾರಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ವಿಜಯ ಶಂಕರ, ರಿಮ್ಸ್ ವೈದ್ಯಕೀಯ ಅಧಿಕ್ಷಕರು ಎಸ್.ಮಂಡುರಕರ್, ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳಾದ ಡಾ.ಗಣೇಶ.ಕೆ, ಡಾ.ಶಿವಕುಮಾರ ನಾರಾ, ಡಾ.ಯಶೋಧಾ, ಐ.ಎಂ.ಎ ಸದಸ್ಯರಾದ ಡಾ.ಶುಶ್ರೂತ್, ಪರಿಸರ ಅಭಿಯಂತರರು ಜೈಪಾಲ ರೆಡ್ಡಿ, ಶಿಕ್ಷಣ, ಮೀನುಗಾರಿಕೆ, ಸಾರಿಗೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಶರಣಮ್ಮ ಸೇರಿದಂತೆ ಸ್ಥಳಿಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಎಲ್ಲಾ ತಾಲೂಕ ಆರೋಗ್ಯ ಅಧಿಕಾರಿಗಳು ಹಾಗೂ ಆರೋಗ್ಯ ಇಲಾಖೆಯ ಇತರ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಹಲವೆಡೆ ಮಳೆ: ಭರ್ತಿಯತ್ತ ಜಲಾಶಯಗಳು



**ಬೆಂಗಳೂರು,ಆ.1:** ರಾಜ್ಯದಲ್ಲಿ ಬರಗಾಲ ನಡುವೆಯೂ ಮಲೆನಾಡು, ಕರಾವಳಿ ಭಾಗ ಹಾಗೂ ಮಹಾರಾಷ್ಟ್ರದ ಪಶ್ಚಿಮ ಘಟ್ಟಗಳಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಹಲವು ಜಲಾಶಯಗಳು ಭರ್ತಿ ಹಂತಕ್ಕೆ ತಲುಪಿವೆ.

ಅದರಲ್ಲೂ ಹೇಮಾವತಿಗೆ 11 ಟಿಎಂಸಿ ನೀರು ಸೇರ್ಪಡೆಯಾದರೆ ಆಲಮಟ್ಟಿ ಭರ್ತಿ ಹಂತಕ್ಕೆ ತಲುಪಿದೆ.ಉಳಿದಂತೆ ತುಂಗಾ ಜಲಾಶಯಗಳು ಭರ್ತಿಯಾಗಿದ್ದು, ಕಬಿನಿ ಜಲಾಶಯಕ್ಕೆ ಒಳಹರಿವಿನಲ್ಲಿ ಏರಿಕೆ ಕಂಡುಬಂದಿದೆ. ನಾರಾಯಣಪುರ ಜಲಾಶಯದಿಂದ ಭಾರೀ ಪ್ರಮಾಣದ ನೀರು ಬಿಡುಗಡೆ ಮಾಡಲಾಗುತ್ತಿದೆ. ಕೊಡಗು ಜಿಲ್ಲೆಯಾದ್ಯಂತ ಮಳೆ ಅರ್ಭಟದಿಂದ ಹಾರಂಗಿ ಜಲಾಶಯದಿಂದ 13,000 ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ.ಹಾಸನ ಜಿಲ್ಲೆಯಲ್ಲಿ ಬರಗಾಲದ ಭೀತಿಯ ನಡುವೆಯೂ ಕಳೆದ ಒಂದೂವರೆ ತಿಂಗಳಿನಿಂದ ಸುರಿದ ಸಾಧಾರಣ ಮಳೆಗೆ ಗೊರೂರಿನ ಹೇಮಾವತಿ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ನೀರು ಹರಿದುಬಂದಿದೆ. ಕಳೆದ ಒಂದೂವರೆ ತಿಂಗಳಲ್ಲಿ ಬರೋಬ್ಬರಿ 11 ಟಿಎಂಸಿ ನೀರು ಜಲಾಶಯವನ್ನು ಸೇರಿದ್ದು, ಜೂನ್ ಆರಂಭದಲ್ಲಿದ್ದ ನೀರಿನ ಮಟ್ಟಕ್ಕೆ ಹೋಲಿಸಿದರೆ ಪ್ರಸ್ತುತ ಜಲಾಶಯದ ನೀರು 19 ಅಡಿಗಳಷ್ಟು ಏರಿಕೆಯಾಗಿದೆ.

ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಹೇಮಾವತಿ ಜಲಾಶಯಕ್ಕೆ 11,686 ಕ್ಯೂಸೆಕ್ ಒಳಹರಿವು ದಾಖಲಾಗಿದೆ. ಜಲಾಶಯದ ನೀರಿನ ಮಟ್ಟ 2,890 ಅಡಿಯಿಂದ 2,909 ಅಡಿಗೆ ಏರಿಕೆಯಾಗಿದೆ. ಒಟ್ಟು 37 ಟಿಎಂಸಿ ಸಾಮರ್ಥ್ಯದ ಜಲಾಶಯದಲ್ಲಿ ಸದ್ಯ 25.986 ಟಿಎಂಸಿ ನೀರು ಸಂಗ್ರಹವಾಗಿದ್ದು, ಜಲಾಶಯ ಶೇ 65 ರಷ್ಟು ಭರ್ತಿಯಾಗಿದೆ. ಕಾವೇರಿ ಜಲವಿವಾದದ ನಡುವೆಯೂ ಗೊರೂರು ಜಲಾಶಯಕ್ಕೆ ನೀರು ಸಮೃದ್ಧವಾಗಿ ಹರಿದುಬರುತ್ತಿರುವುದು ಹಾಸನದ ಜನತೆ ಹಾಗೂ ರೈತರಲ್ಲಿ ಸಂತಸ ತಂದಿದೆ.

ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆ ಚುರುಕುಗೊಂಡಿರುವ ಹಿನ್ನೆಲೆಯಲ್ಲಿ ಕಾವೇರಿ ಕೊಳ್ಳದ ಪ್ರಮುಖ ಜಲಾಶಯಗಳಲ್ಲಿ ಒಂದಾದ ಹೆಚ್.ಡಿ. ಕೋಟೆ ತಾಲ್ಲೂಕಿನ ಕಬಿನಿ ಜಲಾಶಯವು ಭರ್ತಿಯಾಗುವ ಅಂಚಿನಲ್ಲಿದೆ.ಕಬಿನಿ ಜಲಾಶಯಕ್ಕೆ ಒಳಹರಿವಿನಲ್ಲಿ ಏರಿಕೆ ಕಂಡುಬಂದಿದ್ದು,ಕಳೆದ 24 ಗಂಟೆಗಳಲ್ಲಿ ಕಬಿನಿ ಜಲಾಶಯ ವ್ಯಾಪ್ತಿಯಲ್ಲಿ 60 ಮಿ.ಮೀ. ಮಳೆ ದಾಖಲಾಗಿದೆ.

ಕಬಿನಿ ಜಲಾಶಯಕ್ಕೆ ನೀರಿನ ಒಳಹರಿವು ಗಣನೀಯವಾಗಿ ಹೆಚ್ಚಾಗಿದೆ. ಅಂಕಿ–ಅಂಶಗಳ ಪ್ರಕಾರ ಜಲಾಶಯದ ನೀರಿನ ಮಟ್ಟ 2280.08 ಅಡಿಗೆ ತಲುಪಿದೆ. ಕಳೆದ ವರ್ಷ ಇದೇ ದಿನಕ್ಕೆ ಹೋಲಿಸಿದರೆ ಈ ಬಾರಿ ಮಟ್ಟ ಮತ್ತು ಸಂಗ್ರಹ ಸ್ವಲ್ಪ ಕಡಿಮೆಯಿದೆ. ಜಲಾಶಯಕ್ಕೆ ಇಂದು 11,747 ಕ್ಯೂಸೆಕ್ ನೀರು ಒಳಹರಿವು ಹರಿದು ಬರುತ್ತಿದೆ. ಕಳೆದ ವರ್ಷ 8,963 ಕ್ಯೂಸೆಕ್ ಇತ್ತು. ನದಿಗೆ 500 ಕ್ಯೂಸೆಕ್ ನೀರು ಮಾತ್ರ ಹೊರಬಿಡಲಾಗುತ್ತಿದೆ. ಕಳೆದ ವರ್ಷ 8,500 ಕ್ಯೂಸೆಕ್ ಹೊರಬಿಡಲಾಗಿತ್ತು.ಇಂದು ರಾತ್ರಿಯ ವೇಳೆಗೆ ಜಲಾಶಯವು ಸಂಪೂರ್ಣವಾಗಿ ಭರ್ತಿಯಾಗುವ ಸಾಧ್ಯತೆಯಿದೆ. ಹೀಗಾಗಿ ಕಬಿನಿ ಜಲಾಶಯ ಭರ್ತಿಯಾಗುತ್ತಿರುವುದು ರೈತರಲ್ಲಿ ಮಂದಹಾಸ ಮೂಡಿಸಿದೆ. ಈ ನಡುವೆ ಭರ್ತಿಯಾದ ಜಲಾಶಯದ ನೀರನ್ನು ಕಬಿನಿ ಡ್ಯಾಮ್ ಕೆಳಗೆ ಬರುವ ನಾಲೆಗಳಿಗೆ ಮತ್ತು ಕಬಿನಿ ಡ್ಯಾಮ್ ಕೆಳಗಡೆ ಬರುವ ಕೆರೆಗಳಿಗೆ ನೀರು ಹರಿಸಲು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಸೂಚನೆ ನೀಡಿದ್ದಾರೆ.

ಇದೇ ವೇಳೆ ಹಾರಂಗಿ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದ ಹಾರಂಗಿ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದೆ. ಜಲಾಶಯದ ಸುರಕ್ಷತೆಯ ದೃಷ್ಟಿಯಿಂದ ಕಾವೇರಿ ನದಿಗೆ 13 ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಲಾಗುತ್ತಿದೆ. ಐಚೆಇಝ& ಖಿತಜಢಿ

ಕಳೆದ ನಾಲ್ಕು ಐದು ದಿನಗಳಿಂದ ಕೊಡಗು ಜಿಲ್ಲೆಯಲ್ಲಿ ವರುಣನ ಅಬ್ಬರ ಜೋರಾಗಿದೆ. ಅದರಲ್ಲೂ ಮಡಿಕೇರಿ ಹಾಗೂ ಸೋಮವಾರಪೇಟೆ ತಾಲೂಕಿನ ಹಾರಂಗಿ ಜಲಾನಯನ ಪ್ರದೇಶದಲ್ಲಿ ರಾತ್ರಿ ಪೂರ್ತಿ ಸುರಿದ ಭಾರೀ ಮಳೆಯಿಂದ ಹಾರಂಗಿ ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಗಣನೀಯವಾಗಿ ಏರಿಕೆಯಾಗಿದೆ.

ಜಲಪಾತಕ್ಕೆ ಈಗಾಗಲೇ 11,000 ಕ್ಕೂ ಅಧಿಕ ಕ್ಯೂಸೆಕ್ ನೀರು ಹರಿದು ಬರುತ್ತಿರುವುದರಿಂದ ಜಲಾಶಯದ ನೀರಿನ ಮಟ್ಟ ಸುರಕ್ಷತಾ ಮಿತಿಯತ್ತ ತಲುಪಿದ ಹಿನ್ನೆಲೆಯಲ್ಲಿ, ಅಧಿಕಾರಿಗಳು ಮುಂಜಾಗ್ರತಾ ಕ್ರಮವಾಗಿ ಕಾವೇರಿ ನದಿಗೆ 13 ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರನ್ನು ಹರಿಬಿಡುತ್ತಿದ್ದಾರೆ. ಹಾರಂಗಿಯಿಂದ ಬಿಡುಗಡೆಯಾಗುತ್ತಿರುವ ನೀರು ಕಾವೇರಿ ಮೂಲಕ ಕೃಷ್ಣರಾಜ ಸಾಗರ ಜಲಾಶಯದತ್ತ ಹರಿಯಲಿದ್ದು, ಮಾರ್ಗಮಧ್ಯದ ನದಿ ಪಾತ್ರದಲ್ಲಿರುವ ಗ್ರಾಮಗಳ ಜನರು ಎಚ್ಚರಿಕೆಯಿಂದ ಇರಬೇಕೆಂದು ನೀರಾವರಿ ಇಲಾಖೆ ಸೂಚನೆ ನೀಡಿದೆ. ನದಿ ತೀರಕ್ಕೆ ಅನಗತ್ಯವಾಗಿ ತೆರಳದಂತೆ ಹಾಗೂ ಜಾನುವಾರುಗಳನ್ನು ನದಿಯ ಬಳಿ ಮೇಯಿಸದಂತೆ ಎಚ್ಚರಿಕೆ ನೀಡಲಾಗಿದೆ. ಅಲ್ಲದೇ, ಇಂದು ರಾತ್ರಿಯಿಂದಲೇ ಸಾವಿರಾರು ಕ್ಯೂಸೆಕ್ ನೀರು ಬಿಡುಗಡೆ ಮಾಡಿರುವುದರಿಂದ ಏಖಖ ಅಣೆಕಟ್ಟೆಗೆ ಆರ್ಧ ಟಿಎಂಸಿ ನೀರು ಸೇರುವ ನೀರಿಕ್ಷೆ ಇದೆ.

ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನಲ್ಲಿರುವ ಕೃಷ್ಣಾ ನದಿಗೆ ನಿರ್ಮಿಸಲಾದ ಲಾಲ್ ಬಹಾದ್ದೂರ್ ಶಾಸ್ತ್ರಿ ಸಾಗರ (ಆಲಮಟ್ಟಿ) ಜಲಾಶಯ ಭರ್ತಿ ಹಂತ ತಲುಪಿದೆ. ಉಳಿದಂತೆ ಮಲೆನಾಡು ಭಾಗದಲ್ಲಿ ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ಗಾಜನೂರಿನ ತುಂಗಾ ಡ್ಯಾಂ ಸಂಪೂರ್ಣ ಭರ್ತಿಯಾಗಿದೆ. ಡ್ಯಾಂನ 22 ಕ್ರಸ್ಟ್ ಗೇಟ್‌ಗಳನ್ನು ತೆಗೆದು 55,000 ಕ್ಯೂಸೆಕ್ ನೀರನ್ನು ತುಂಗಾ ನದಿಗೆ ಹರಿಬಿಡಲಾಗಿದೆ. ಕೃಷಿ ಚಟುವಟಿಕೆಗೆ ಮಳೆ ಕೊರತೆಯಿಂದ ಆತಂಕದಲ್ಲಿದ್ದ ಶಿವಮೊಗ್ಗ, ದಾವಣಗೆರೆ, ಬಳ್ಳಾರಿ, ಹಾವೇರಿ ಹಾಗೂ ಗದಗ ಜಿಲ್ಲೆಯ ರೈತರಿಗೆ ಜಲಾಶಯ ಭರ್ತಿಯಾಗಿರುವುದರಿಂದ ರೈತರ ಮೊಗದಲ್ಲಿ ಸಂತಸ ಮನೆ ಮಾಡಿದೆ. ನಾರಾಯಣಪುರ ಜಲಾಶಯದಿಂದ ಭಾರೀ ಪ್ರಮಾಣದ ನೀರು ಬಿಡುಗಡೆ ಮಾಡಲಾಗುತ್ತಿದ್ದು ರಾಯಚೂರಿನಲ್ಲಿ ಕೃಷ್ಣಾ ನದಿ ಮೈದುಂಬಿ ಹರಿಯುತ್ತಿದ್ದು,ರಾಯಚೂರು ತಾಲೂಕಿನ ಕಾಡ್ಲೂರಿನಲ್ಲಿ ನದಿ ದಂಡೆಯಲ್ಲಿರುವ ಶ್ರೀಉಪೇಂದ್ರ ತೀರ್ಥ ಕರಾರ್ಚಿತ ಪ್ರಾಣದೇವರ ದೇವಸ್ಥಾನ ಈಗ ಜಲಾವೃತವಾಗಿದೆ. ದೇವಸ್ಥಾನಕ್ಕೆ ಭಕ್ತರು ತೆರಳದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ನೀಡಿದ್ದಾರೆ.ಕೃಷ್ಣಾ ಮೇಲ್ಭಾಗದಲ್ಲಿ ಉತ್ತಮ ಮಳೆ ಹಿನ್ನೆಲೆ ಜಲಾಶಯ ಭರ್ತಿಯಾಗುವ ಹಂತದಲ್ಲಿದೆ.ಡ್ಯಾಮ್ ಭರ್ತಿಯಾಗಲು ಇನ್ನೂ ನಾಲ್ಕು ಟಿಎಂಸಿ ಮಾತ್ರ ಬಾಕಿಯಿದೆ. ಹೀಗಾಗಿ ಸದ್ಯ ನಾರಾಯಣಪುರ ಜಲಾಶಯದಿಂದ ಕೃಷ್ಣಾ ನದಿಗೆ 1 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದೆ.ಜಲಾಶಯಕ್ಕೆ 1.1 ಲಕ್ಷ ಕ್ಯೂಸೆಕ್ ಒಳಹರಿವು ಇದೆ.

# ಮನೆ ಕಟ್ಟದಿದ್ದರೆ ನಿವೇಶನ ವಾಪಸ್: ತ್ಯಾಜ್ಯ ಸಂಗ್ರಹ ತಡೆಗೆ ಕಠಿಣ ಕ್ರಮ



**ಬೆಂಗಳೂರು, ಆ. 1–**"ಬಿಡಿಎ ಆಗಲಿ, ಕಾರ್ಪೊರೇಷನ್ ನಿವೇಶನವಾಗಲಿ ಅದರ ಮಾಲೀಕರು ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಹೀಗಾಗಿ ನಿವೇಶನ ಪಡೆದ 5 ವರ್ಷದೊಳಗೆ ಅಲ್ಲಿ ಮನೆ ನಿರ್ಮಾಣ ಮಾಡಬೇಕು. ಕಟ್ಟದಿದ್ದರೆ, ಅದಕ್ಕೆ ದುಪ್ಪಟ್ಟು ತೆರಿಗೆ ಅಥವಾ ನಿವೇಶನ ಹಿಂಪಡೆಯಲಾಗುವುದು. ಮನೆ ಕಟ್ಟದೇ ಖಾಲಿ ಇಟ್ಟುಕೊಂಡರೆ ಅಲ್ಲಿ ಕಸದ ಸಮಸ್ಯೆ ಎದುರಾಗುತ್ತದೆ. ಹೀಗಾಗಿ ಈ ತೀರ್ಮಾನ ಮಾಡಲಾಗಿದೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಹೆಬ್ಬಾಳ ಜಂಕ್ಷನ್ ಬಳಿ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನಕ್ಕೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮನೆ ಕಟ್ಟದಿದ್ದರೆ ನಿವೇಶನ ವಾಪಸ್ ತೆಗೆದುಕೊಳ್ಳುತ್ತೀರಾ ಎಂದು ಕೇಳಿದಾಗ, "ಬೇರೆ ವಿಧಿಯಿಲ್ಲ, ನಾವು ಇದನ್ನು ಮಾಡಲೇಬೇಕಾಗುತ್ತದೆ. ನಾವು ನಿವೇಶನ ನೀಡುವುದು ಮನೆ ಕಟ್ಟಿಕೊಳ್ಳಲು. ಕೆಲವರು 20, 30, 40 ವರ್ಷವಾದರೂ ಮನೆ ಕಟ್ಟಿಲ್ಲ. ಅವರು ಕಟ್ಟಿರುವ ಹಣವನ್ನು ಬಡ್ಡಿ ಸಮೇತ ವಾಪಸ್ ನೀಡಿ ನಿವೇಶನ ಹಿಂಪಡೆಯಲಾಗುವುದು. ಸಿಐಟಿಬಿ, ಬಿಡಿಎ, ಸೊಸೈಟಿಗಳಿಂದ ನಿವೇಶನ ಪಡೆದ ಮೇಲೆ ಮನೆ ಕಟ್ಟಬೇಕಾಗಿರುವುದು ಅವರ ಕರ್ತವ್ಯ. ನಿವೇಶನಕ್ಕೆ ಕಾಪೌಂಡ್ ಕೂಡ ಹಾಕದೇ, ಕಸ ಹಾಕಲು ಅವಕಾಶ ಕೊಟ್ಟರೆ ಹೇಗೆ? ಅವರ ಜಾಗದಲ್ಲಿ ಅವರು ಕಸ ಹಾಕದೇ ಇದ್ದರೂ, ಅವರ ಜಾಗವನ್ನು ಅವರು ರಕ್ಷಣೆ ಮಾಡಿಕೊಳ್ಳಬೇಕು" ಎಂದು ತಿಳಿಸಿದರು.

"ಮಹಾತ್ಮಾ ಗಾಂಧೀಜಿ ಅವರು ಸ್ವಚ್ಛತೆಯೇ ದೇವರು ಎಂದು ನಮಗೆ ಮಾರ್ಗದರ್ಶನ ನೀಡಿದ್ದಾರೆ. ರಾಜೀವ್ ಗಾಂಧಿ ಅವರು ನಿಮ್ಮ ಮನೆ ಮುಂದೆ ಸ್ನಚ್ಛತೆ ಕಾಪಾಡಿದರೆ, ಬೀದಿ ಸ್ವಚ್ಛವಾಗುತ್ತದೆ. ಬೀದಿ ಸ್ವಚ್ಛವಾದರೆ ಊರು ಸ್ವಚ್ಛವಾಗುತ್ತದೆ, ಊರು ಸ್ವಚ್ಛವಾದರೆ ನಾಡು ಸ್ವಚ್ಛವಾಗುತ್ತದೆ ಎಂದು ಹೇಳಿದ್ದಾರೆ. ಬೆಂಗಳೂರಿನ ಸ್ವಚ್ಛತೆ ನಮ್ಮ ಕರ್ತವ್ಯ. ನಿಮ್ಮ ಬೆಂಗಳೂರನ್ನು ಕಾಪಾಡಿಕೊಳ್ಳುವುದು ನಿಮ್ಮ ಕರ್ತವ್ಯ" ಎಂದರು.

ಎಲ್ಲೆಂದರಲ್ಲಿ ಕಸ ಸುರಿಯುವ ವಾಹನ ಮುಲಾಜಿಲ್ಲದೆ ಮುಟ್ಟುಗೋಲು ಹಾಕಿಕೊಳ್ಳಿ "ಬೆಂಗಳೂರು ಸರ್ಕಾರದ ಆಸ್ತಿಯಲ್ಲ, ಬೆಂಗಳೂರು ನಿಮ್ಮ ಆಸ್ತಿ. ಇದನ್ನು ಕಾಪಾಡಲು ಅಭಿಯಾನ ಆರಂಭಿಸಿದ್ದೇವೆ. ಘನತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯುವ ವಾಹನಗಳಿಗೆ ನೋಟೀಸ್ ಕೊಡಲಾಗಿತ್ತು. ಕ್ಯಾಮೆರಾ ಕಣ್ಗಾವಲು ಇಡಲಾಗಿತ್ತು. ಈಗ ಮತ್ತೆ ಯಥಾಸ್ಥಿತಿಯಲ್ಲಿ ಕಸ ಸುರಿಯುತ್ತಿದ್ದಾರೆ. ಅನುಮತಿ ಇಲ್ಲದೇ ಕಸ ಸುರಿಯುವವರ ವಾಹನವನ್ನು ಮುಲಾಜಿಲ್ಲದೇ ಮುಟ್ಟುಗೋಲು ಹಾಕಿಕೊಳ್ಳಿ ಎಂದು ನಾನು ಪೊಲೀಸರಿಗೆ ನಿರ್ದೇಶನ ನೀಡುತ್ತಿದ್ದೇನೆ. ಜನರಲ್ಲಿ ನಾವು ನಾಗರಿಕ ಪ್ರಜ್ಞೆ ತರಬೇಕಾಗಿದೆ" ಎಂದು ಅಭಿಪ್ರಾಯಪಟ್ಟರು.

"ಹಸಿರಿನ ವಿಚಾರವಾಗಿ ನನ್ನಲ್ಲಿ ವಿಭಿನ್ನ ಆಲೋಚನೆ ಇದೆ. ಅದನ್ನು ಈಗ ನಾನು ಪ್ರಸ್ತಾಪ ಮಾಡುವುದಿಲ್ಲ, 100 ದಿನಗಳ ಕಾರ್ಯಕ್ರಮದ ವೇಳೆ ಪ್ರಕಟ ಮಾಡುತ್ತೇವೆ. ಬೆಂಗಳೂರು ಸ್ವಚ್ಛತೆ ಬಗ್ಗೆ ಟೀಕೆ ಟಿಪ್ಪಣಿ ಬರುತ್ತಿವೆ. ನಾವು ಮಾಡುವ ಕೆಲಸ ಶಾಶ್ವತವಾಗಿ ಉಳಿಯುತ್ತದೆ, ಟೀಕೆಗಳು ಸಾಯುತ್ತವೆ.

ಶಿವಾಜಿನಗರದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ವೇಳೆ ಅಧಿಕಾರಿಗಳ ಮೇಲೆ ದಾಳಿ ಮಾಡಲಾಗಿದೆ. ಯಾರಾದರೂ ಇದನ್ನು ಅಧಿಕಾರಿಗಳ ಮೇಲೆ ದಾಳಿ ಎಂದು ಭಾವಿಸಿದ್ದರೆ ಅದು ಭ್ರಮೆ. ಇದು ಸರ್ಕಾರ, ಸಚಿವರು ಹಾಗೂ ಶಾಸಕರ ಮೇಲಿನ ದಾಳಿ ಎಂದೇ ಭಾವಿಸುತ್ತೇವೆ. ನಾವು ಎಲ್ಲಾ ಪಕ್ಷದ ಶಾಸಕರನ್ನು ವಿಶ್ವಾಸಕ್ಕೆ ಪಡೆದು ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ" ಎಂದು ಹೇಳಿದರು.

"ಬೀದಿವ್ಯಾಪಾರದವರಿಗೆ ಬೇರೆ ಜಾಗಗಳಲ್ಲಿ ವ್ಯಾಪಾರ ಮಾಡಲು ಅವಕಾಶ ಕಲ್ಪಿಸಲಾಗುವುದು. ಬೀದಿ ವ್ಯಾಪಾರಿಗಳು ಪಾದಚಾರಿಗಳು ಹಾಗೂ ವಾಹನ ಸಂಚಾರಕ್ಕೆ ತೊಂದರೆ ಮಾಡಲು ಸಾಧ್ಯವಿಲ್ಲ. ಇಂದಿನಿಂದ ಆರಂಭವಾಗುತ್ತಿರುವ ಈ ಅಭಿಯಾನ ಬೆಂಗಳೂರಿಗೆ ಮಾತ್ರವಲ್ಲ, ಇಡೀ ರಾಜ್ಯಕ್ಕೆ ಮಾದರಿ ಕಾರ್ಯಕ್ರಮವಾಗಿದೆ. ಎಲ್ಲಾ ಶಾಸಕರು ತಮ್ಮ ಕ್ಷೇತ್ರದಲ್ಲಿ ಈ ಅಭಿಯಾನ ಕೈಗೆತ್ತಿಕೊಳ್ಳಬೇಕು. ಇದು ನಿಮ್ಮ ಬೆಂಗಳೂರು, ಇಡೀ ದೇಶ ನಿಮ್ಮನ್ನು ಗಮನಿಸುತ್ತಿದೆ. ಅನೇಕ ರಾಷ್ಟ್ರೀಯ ನಾಯಕರು ಅನೇಕ ಮಾರ್ಗದರ್ಶನ ನೀಡಿದ್ದು, ಅದನ್ನು ಮುಂದುವರಿಸಿಕೊಂಡು ಹೋಗೋಣ" ಎಂದರು.

"ದೇಶದ ಎಲ್ಲಾ ನಗರಗಳಲ್ಲೂ ಈ ಕಸ ಹಾಕುವ ಸಮಸ್ಯೆ ಇದೆ. ಬೆಂಗಳೂರಿನಲ್ಲಿ ಕಸದ ವಿಚಾರವಾಗಿ ಕಾರ್ಯಕ್ರಮ ಮಾಡಿ ಅನೇಕ ವರ್ಷಗಳಾಗಿವೆ. ಮುಂದಿನ ದಿನಗಳಲ್ಲಿ ಇದಕ್ಕೆ ಹೊಸ ರೂಪ ನೀಡುತ್ತಿದ್ದೇವೆ. ಎನ್ ಜಿಓಗಳು, ಸಂಘ ಸಂಸ್ಥೆಗಳು ಒಂದೊಂದು ಪ್ರದೇಶದ ಜವಾಬ್ದಾರಿ ಹೊತ್ತುಕೊಂಡರೆ ನಾನು ಸ್ವಾಗತಿಸುತ್ತೇನೆ. ನಾಲ್ಕು ರಸ್ತೆ ಜವಾಬ್ದಾರಿ ತೆಗೆದುಕೊಂಡು ಬಂದರೆ ಸಾಕು. ಈ ಅಭಿಯಾನಕ್ಕೆ ನಾಗರಿಕರ ಸಹಕಾರ ಬೇಕು" ಎಂದು ತಿಳಿಸಿದರು.

ಕಾವೇರಿ ವಿಚಾರವಾಗಿ ಬಿಜೆಪಿ ನಾಯಕರ ಟೀಕೆ, ಆರೋಪದ ಬಗ್ಗೆ ಕೇಳಿದಾಗ, "ಬಿಜೆಪಿ ನಾಯಕರು ಆರೋಪ ಮಾಡುತ್ತಾರೆ. ನಾವು ಇನ್ನೂ ನೀರು ಹರಿಸಿಲ್ಲ, ಅವರೇ ಸರ್ವಪಕ್ಷ ಸಭೆ ಕರೆಯುವ ಸಲಹೆ ನೀಡಿದ್ದಾರೆ. ಆದರೆ ಇಂದು ಸಂಜೆ ವೇಳೆಗೆ ಒಂದು ಅಣೆಕಟ್ಟು ಭರ್ತಿಯಾಗಲಿದೆ. ಆ ಅಣೆಕಟ್ಟು ತುಂಬಿದ ಬಳಿಕವೂ ನೀರನ್ನು ಹಿಡಿದಿಡಲು ಆಗುವುದಿಲ್ಲ. ಅತ್ತ ತಮಿಳುನಾಡಿನವರು ಸುಪ್ರೀಂ ಕೋರ್ಟ್‌ಗೆ ಹೋಗಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಎಂದು ಈಗಾಗಲೇ ಹೇಳಿಕೆಗಳು ಬಂದಿವೆ. 36–39 ಕ್ಯೂಸೆಕ್ ನೀರು ಒಳಹರಿವು ಇದ್ದು, ನಮಗೆ ನೀರು ಹರಿಸಲು ಹೇಳಿರುವುದು 3,500 ಕ್ಯೂಸೆಕ್ ನೀರು. ವಿರೋಧ ಪಕ್ಷದವರು ಹಾಗೂ ಕಾನೂನು ತಜ್ಞರೊಂದಿಗೆ ಚರ್ಚೆ ಮಾಡಿ ನಾವು ತೀರ್ಮಾನ ಮಾಡುತ್ತೇವೆ" ಎಂದು ತಿಳಿಸಿದರು.

# ವಿದ್ಯಾನಗರದಲ್ಲಿ ಗುರುವೀರೇಶ್ವರರ ಪುರಾಣ ಪ್ರವಚನ



**ಕಲಬುರಗಿ,ಆ.1–**ನಗರದ ಸೇಡಂ ರಸ್ತೆಯ ಬಸವೇಶ್ವರ ಆಸ್ಪತ್ರೆಯ ಎದುರುಗಡೆ ಇರುವ ವಿದ್ಯಾನಗರ ಕಾಲೋನಿ ಮಲ್ಲಿಕಾರ್ಜುನ ಸಮುದಾಯ ಭವನದಲ್ಲಿ ವಿದ್ಯಾನಗರ ವೆಲ್ಫೇರ್ ಸೊಸೈಟಿ ವತಿಯಿಂದ ಈ ವರ್ಷದ ಶ್ರಾವಣ ಮಾಸದ ನಿಮಿತ್ಯ ಬಬಲಾದ, ಮುತ್ಯಾನ ಬಬಲಾದ ಎಂದೇ ಹೆಸರುವಾಸಿಯಾಗಿರುವ ಶ್ರೀ ಗುರು ಚನ್ನವೀರೇಶ್ವರರ ಪುರಾಣ ಪ್ರವಚನ ನಡೆಸಬೇಕೆಂದು ಜುಲೈ 26 ರಂದು ನಡೆದ ಸೊಸೈಟಿ ಸರ್ವ ಸದಸ್ಯರ ಪುರಾಣ ಪೂರ್ವ ಭಾವಿ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಯಿತೆಂದು ಸೊಸೈಟಿ ಕಾರ್ಯದರ್ಶಿ ಶಿವರಾಜ ಅಂಡಗಿ ಪ್ರಕಟಣೆ ತಿಳಿಸಿದ್ದಾರೆ.

ಪುರಾಣ ಪ್ರವಚನಕಾರರಾದ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಶಿಷ್ಯರಾದ ವೇ.ಮೂ. ವೀರಯ್ಯ ಶಾಸ್ತ್ರೀಗಳು ಪುರಾಣ ಪ್ರವಚನ ನಡೆಸಿಕೊಡಲಿದ್ದು, ಶಿವಕುಮಾರ ಎಂ. ಹಿರೇಮಠ ಜಾಲಹಳ್ಳಿ ಅವರು ಸಂಗೀತ ಹಾಗೂ ಗಾಯನ ಮಾಡಲಿದ್ದಾರೆ. ಅಡಿವೇಶಕುಮಾರ ಗೋಕಾಕ ಅವರು ತಬಲಾ ಸಾಥ್ ನೀಡಲಿದ್ದಾರೆ.

ಸೊಸೈಟಿ ಅಧ್ಯಕ್ಷ ಮಲ್ಲಿನಾಥ ದೇಶಮುಖ ಸರ್ವ ಸದಸ್ಯರ ಸಭೆಯ ಅಧ್ಯಕ್ಷತೆ ವಹಿಸಿದರು. ಕಾರ್ಯದರ್ಶಿ ಶಿವರಾಜ ಅಂಡಗಿ, ಖಜಾಂಚಿ ಗುರುಲಿಂಗಯ್ಯ ಮಠಪತಿ, ಆಡಳಿತ ಮಂಡಳಿ ಸದಸ್ಯರಾದ ಉಮೇಶ ಶೆಟ್ಟಿ, ಬಿ. ಎನ್. ಪುಣ್ಯಶೆಟ್ಟಿ, ಬಸವಂತರಾವ ಜಾಬಶೆಟ್ಟಿ, ಸುಭಾಷ ಮಂಠಾಳೆ, ಮಲ್ಲಿಕಾರ್ಜುನ ಕಾಳೆ, ಕಾಶಿನಾಥ ಚಿನ್ಮಳ್ಳಿ, ಶ್ರೀಮಂತರಾವ ರಾಜಾಪೂರ, ಆದಪ್ಪ ಸಿಕೇದ್, ನಾಗರಾಜ ಹೆಬ್ಬಾಳ, ಸದಾಶಿವ ಕಂಠಿ, ಶಾಂತಯ್ಯ ಬೀದಿಮನಿ, ಆದಿಲಿಂಗಯ್ಯ ಕೊಡಳ್ಳಿ, ಸಂಗಮೇಶ ದಿವಟಗಿ, ನಾಗಭೂಷಣ ಹಿಂದೊಡ್ಡಿ, ನಾಗರಾಜ ಮುಗಳಿ, ವೀರೇಶ ನಾಗಶೆಟ್ಟಿ, ಉದಯಕುಮಾರ ಪಡಶೆಟ್ಟಿ, ರಮೇಶ ದಸ್ಮಾ, ಮಲ್ಲಿಕಾರ್ಜುನ ಸಿಂದಗಿ, ಶಾಂತಯ್ಯ ಬೀದಿಮನಿ, ರೇವಣಸಿದ್ದಪ್ಪ ಜೀವಣಗಿ, ತರುಣಶೇಖರ ಬಿರಾದಾರ, ಶರಣಯ್ಯ ಸ್ವಾಮಿ ಮಠಪತಿ ಇನ್ನಿತರರು ಉಪಸ್ಥಿತರಿದ್ದರು.

# ಹಾರ್ವೇಸ್ಟರ್ ಹಬ್ ಸ್ಥಾಪನೆಗೆ ಅರ್ಜಿ ಆಹ್ವಾನ

**ರಾಯಚೂರು ಆಗಸ್ಟ್ 01:** ಕೃಷಿ ಇಲಾಖೆಯಿಂದ 2026–27ನೇ ಸಾಲಿನಲ್ಲಿ ರಾಜ್ಯವಲಯ ಯಾಂತ್ರೀಕರಣ ಯೋಜನೆಯಡಿ ಹಾರ್ವೇಸ್ಟರ್ ಹಬ್ ಸ್ಥಾಪನೆ ಕುರಿತು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಯಚೂರು ಜಿಲ್ಲೆಗೆ ಪರಿಶಿಷ್ಟ ಪಂಗಡದಡಿ ವೈಯಕ್ತಿಕ ಫಲಾನುಭವಿಗೆ ಒಂದು ಘಟಕ, ಹಾಗೂ ಸಂಘ–ಸಂಸ್ಥೆಗಳಿಗೆ ಒಂದು ಘಟಕ ಗುರಿಯನ್ನು ಹೊಂದಿದ್ದು, ಆಸಕ್ತಿಯುಳ್ಳ ಫಲಾನುಭವಿಗಳು ಹಾಗೂ ಸಂಘ–ಸಂಸ್ಥೆಗಳು ಹಾರ್ವೇಸ್ಟರ್ ಹಬ್ ಸ್ಥಾಪಿಸಬಹುದಾಗಿದೆ.

ದಾಖಲಾತಿಗಳು: ಅರ್ಜಿ, ಪಹಣಿ, ಜಾತಿ ಪ್ರಮಾಣ ಪತ್ರ, ಗುರಿತಿನ ಪತ್ರ, ಬ್ಯಾಂಕ್ ಖಾತೆ ವಿವರ, ಸಂಸ್ಥೆಯಾಗಿದ್ದರೆ–ನೊಂದಾಯಿಸಿದ ಪ್ರಮಾಣ ಪತ್ರ ಮತ್ತು ಕಳೆದ 3 ಸಾಲಿನ ವಹಿವಾಟು

ವರದಿ, ತಾತ್ವಿಕ ಸಾಲ ಮಂಜುರಾತಿ ಪತ್ರದೊಂದಿಗೆ ಆಗಸ್ಟ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಕೃಷಿ ಇಲಾಖೆಯ ಕಚೇರಿಯನ್ನು ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನ್ವಿಯ ಲಾಡ್ಜ್‌ನಲ್ಲಿ ವ್ಯಕ್ತಿಯ ಅಸಹಜ ಸಾವು

ಧೈರ್ಯದ ದಾರಿ



**ಮಾನ್ವಿ :** ಪಟ್ಟಣದ ಬಾಲಾಜಿ ಕಾಂಫರ್ಟ್ ಲಾಡ್ಜ್‌ನಲ್ಲಿ ರೂಮ್ ಪಡೆದು ತಂಗಿದ್ದ ರಾಯಚೂರು ನಿವಾಸಿ ಹಿರೇಗೌಡ ಸಂಗಪುರ್ (55), ತಂದೆ ಸಂಗನಗೌಡ, ಶನಿವಾರ ಅಸಹಜವಾಗಿ ಮೃತಪಟ್ಟಿದ್ದಾರೆ.

ಮೃತರ ಪತ್ನಿ ವಿನೂತ ನೀಡಿದ ದೂರಿನ ಮೇರೆಗೆ ಮಾನ್ವಿ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವು (ಯುಡಿಆರ್) ಪ್ರಕರಣ ದಾಖಲಾಗಿದೆ.
ಘಟನೆಯ ಕುರಿತು ಮಾನ್ವಿ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಸೋಮಶೇಖರ ಎಸ್. ಕೆಂಚರೆಡ್ಡಿ ತನಿಖೆ ಕೈಗೊಂಡಿದ್ದಾರೆ.

## ಕಾವೇರಿ ವಿವಾದದ ಬಿಸಿ: ಕರ್ನಾಟಕ ಪ್ರವಾಸ ಮುಂದೂಡುವಂತೆ ತಮಿಳುನಾಡು ಸಿಎಂಗೆ ಡಿ.ಕೆ. ಶಿವಕುಮಾರ್ ಮನವಿ



**ಬೆಂಗಳೂರು, ಜುಲೈ 1:** ಕಾವೇರಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಪ್ರತಿಭಟನೆಗಳು ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ, ಆಗಸ್ಟ್ 3ರಂದು ನಿಗದಿಯಾಗಿದ್ದ ತಮ್ಮ ಬೆಂಗಳೂರು ಪ್ರವಾಸವನ್ನು ಮುಂದೂಡುವಂತೆ ಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಅವರು ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರಿಗೆ ಮನವಿ ಮಾಡಿದ್ದಾರೆ.

ವಾತಾವರಣ ತಿಳಿಯಾದ ನಂತರ ಭೇಟಿಗೆ ಮನವಿ
ಶುಕ್ರವಾರ ಬೆಂಗಳೂರಿನಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್, "ತಮಿಳುನಾಡು ಮುಖ್ಯಮಂತ್ರಿಗಳ ಭೇಟಿಗಾಗಿ ನಮ್ಮ ಸರ್ಕಾರ ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿತ್ತು. ಆದರೆ, ಪ್ರಸ್ತುತ ರಾಜ್ಯದಲ್ಲಿ ಕಾವೇರಿ ನೀರು ಬಿಡುಗಡೆ ಆದೇಶದ ವಿರುದ್ಧ ಸಾರ್ವಜನಿಕ ಆಕ್ರೋಶ ಹೆಚ್ಚಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಸಭೆ ನಡೆಸುವುದು ಸೂಕ್ತವಲ್ಲ. ವಾತಾವರಣ ಶಾಂತವಾದ ನಂತರ ಮತ್ತೊಂದು ಅನುಕೂಲಕರ ದಿನಾಂಕದಂದು ಭೇಟಿಯಾಗಿ ಮಾತುಕತೆ ನಡೆಸೋಣ ಎಂದು ಅವರಿಗೆ ವಿನಂತಿಸಿದ್ದೇನೆ" ಎಂದು ತಿಳಿಸಿದರು.

ಕಾವೇರಿ ಪ್ರಾಧಿಕಾರದ ಆದೇಶ ಮತ್ತು ರಾಜ್ಯಾದ್ಯಂತ ಆಕ್ರೋಶ
ಕಾವೇರಿ ನೀರು ನಿಯಂತ್ರಣ ಸಮಿತಿಯ (ಅಘಖಅ) ನಿರ್ದೇಶನವನ್ನು ಎತ್ತಿಹಿಡಿದಿರುವ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು (ಅಘಒಂ), ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ದಿನನಿತ್ಯ 3,500 ಕ್ಯೂಸೆಕ್ ??ರು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ಆದೇಶಿಸಿದೆ. ಈ ನಿರ್ಧಾರವನ್ನು ಖಂಡಿಸಿ ಮಂಡ್ಯ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ರೈತರು ಹಾಗೂ ಕನ್ನಡಪರ ಸಂಘಟನೆಗಳು ಬೀದಿಗಿಳಿದು ತೀವ್ರ ಪ್ರತಿಭಟನೆ ನಡೆಸುತ್ತಿವೆ. ಅಲ್ಲದೆ, ಆಗಸ್ಟ್ 13ರಂದು ರಾಜ್ಯಾದ್ಯಂತ ಬಂದ್‌ಗೆ ಕರೆ ನೀಡಲಾಗಿದೆ.

ಆಗಸ್ಟ್ 2ರಂದು ಸರ್ವಪಕ್ಷ ಸಭೆ: ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ನೀರಿನ ಅಭಾವವಿದ್ದರೂ ಪ್ರಾಧಿಕಾರದ ಆದೇಶದಿಂದ ಉಂಟಾಗಿರುವ ಕಾನೂನು ಮತ್ತು ರಾಜಕೀಯ ಸ್ಥಿತಿಗತಿಗಳ ಕುರಿತು ಚರ್ಚಿಸಲು ಆಗಸ್ಟ್ 2ರ ಭಾನುವಾರ ಸರ್ವಪಕ್ಷ ಸಭೆಯನ್ನು ಕರೆಯಲಾಗಿದೆ. ಈ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಪಾತ್ರದ ಸಂಸದರು ಹಾಗೂ ಶಾಸಕರು ಭಾಗವಹಿಸಲಿದ್ದಾರೆ.
ಮೇಕೆದಾಟು ಯೋಜನೆಯಿಂದ ತಮಿಳುನಾಡಿಗೂ ಅನುಕೂಲ
ಇದೇ ವೇಳೆ ಮೇಕೆದಾಟು ಸಮತೋಲನ ಜಲಾಶಯ ಯೋಜನೆಯ ಕುರಿತು ಮಾತನಾಡಿದ ಶಿವಕುಮಾರ್, "ಮೇಕೆದಾಟು ಯೋಜನೆಯಿಂದ ಕರ್ನಾಟಕಕ್ಕಿಂತ ತಮಿಳುನಾಡಿಗೆ ಹೆಚ್ಚಿನ ಲಾಭವಿದೆ. ಕರ್ನಾಟಕಕ್ಕೆ ಕೇವಲ 400 ಮೆಗಾವಾಟ್ ಜಲವಿದ್ಯುತ್ ಉತ್ಪಾದನೆಯ ಅನುಕೂಲ ಸಿಗಲಿದ್ದು, ನೀರಾವರಿ ವಿಸ್ತರಣೆಗೆ ಇದನ್ನು ಬಳಸಲಾಗುವುದಿಲ್ಲ. ಸುಪ್ರೀಂ ಕೋರ್ಟ್ ತೀರ್ಪಿನ ಅಡಿಯಲ್ಲೇ ಕಾನೂನಾತ್ಮಕವಾಗಿ ಈ ಯೋಜನೆಯನ್ನು ಮುಂದುವರಿಸಲಾಗುವುದು" ಎಂದು ಸ್ಪಷ್ಟಪಡಿಸಿದರು.

# ವಾಹನ ಒದಗಿಸಲು ಅರ್ಜಿ ಆಹ್ವಾನ

**ರಾಯಚೂರು ಆಗಸ್ಟ್ 01:** ವಿದ್ಯುತ್ ಪರಿವೀಕ್ಷಣಾಲಯ ಇಲಾಖೆಯ ರಾಯಚೂರು ವಿಭಾಗದ ವಿದ್ಯುತ್ ಪರಿವೀಕ್ಷಣಾ ಅಧಿಕಾರಿಗಳಿಗೆ ಸರ್ಕಾರಿ ಕೆಲಸಗಳಿಗೆ, ಅಧಿಕೃತ ನೊಂದಾಯಿತ ಟ್ರಾವೆಲ್ಸ್ ಏಜೆನ್ಸಿಯವರಿಂದ ಬಾಡಿಗೆ ಆಧಾರದ ಮೇಲೆ ಹವಾ ನಿಯಂತ್ರಣ ರಹಿತ (ನಾನ್ ಎಸಿ) ವಾಹನವನ್ನು ಒಂದು ವರ್ಷದ ಅವಧಿಗೆ ಒಸಗಿಸಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.
ಆಸಕ್ತಿಯುಳ್ಳವರು ದಿನಾಂಕ: 08-08-2026ರ ಸಂಜೆ 5ರೊಳಗೆ ಕಚೇರಿ ಅವಧಿಯಲ್ಲಿ ಟೆಂಡರ್ ಅರ್ಜಿಗಳನ್ನು ಈ ಕಾರ್ಯಾಲಯಕ್ಕೆ ಸಲ್ಲಿಸಬಹುದಾಗಿದೆ. ತದನಂತರ ಬಂದ ಲಕೋಟೆಗಳನ್ನು ಸ್ವೀಕರಿಸುವುದಿಲ್ಲ. ಹಾಗೂ ಸ್ವೀಕರಿಸಲಾದ ಅರ್ಜಿಗಳ ಬಿಡ್‌ನ್ನು ದಿನಾಂಕ: 11-08-2026ರಂದು ತೆರೆಯಲಾಗುವುದು.
ಹೆಚ್ಚಿನ ಮಾಹಿತಿಗಾಗಿ ಇ-ಪ್ರೊಕ್ಯೂರಮೆಂಟ್ ಪೋರ್ಟಲ್ ವಿಳಾಸ: https://kppp.karnataka.gov.inUE ನೀಡಿ ಭೇಟಿ ಮಾಹಿತಿ ಪಡೆಯಬಹುದಾಗಿದೆ. ಅಥವಾ ಕಚೇರಿಯ ದೂರವಾಣಿ ಸಂಖ್ಯೆ: 0853-2220024ಗೆ ಸಂಪರ್ಕ ಮಾಡಬಹುದಾಗಿದೆ ಎಂದು ವಿದ್ಯುತ್ ಪರಿವೀಕ್ಷಣಾಲಯ ಇಲಾಖೆಯ ವಿದ್ಯುತ್ ಪರಿವೀಕ್ಷಣಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹದಿ ಹರೆಯದವರ ಆರೋಗ್ಯ ಮತ್ತು ಕ್ಷೇಮ ದಿನಾಚರಣೆ ಕಾರ್ಯಕ್ರಮ ಯಶಸ್ವಿ




**ದೇವಲ ಗಾಣಗಾಪುರ,ಆ.1**–ದೇವಲ ಗಾಣಗಾಪುರ ಸಮುದಾಯ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ತೆಲ್ಲೂರ ಸರ್ಕಾರಿ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ (ಖಐಖಐ) ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಿಷನ್ ಶಕ್ತಿ ಕಾರ್ಯಕ್ರಮದ ಸಂಯುಕ್ತ ಆಶ್ರಯದಲ್ಲಿ ಹದಿ ಹರೆಯದವರ ಆರೋಗ್ಯ ಮತ್ತು ಕ್ಷೇಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.
ಕಾರ್ಯಕ್ರಮದಲ್ಲಿ ಆಪ್ತ ಸಮಾಲೋಚಕರಾದ ಮಲ್ಲಿಕಾರ್ಜುನ ಸಿಂಗೆ ಮಾತನಾಡಿ, ಹದಿ ಹರೆಯವು ಮಕ್ಕಳ ಜೀವನದ ಅತ್ಯಂತ ಮಹತ್ವದ ಬೆಳವಣಿಗೆಯ ಹಂತವಾಗಿದ್ದು, ಈ ಅವಧಿಯಲ್ಲಿ ದೈಹಿಕ, ಮಾನಸಿಕ ಹಾಗೂ ಭಾವನಾತ್ಮಕ ಬದಲಾವಣೆಗಳು ವೇಗವಾಗಿ ಸಂಭವಿಸುತ್ತವೆ. ಆದ್ದರಿಂದ ಸರಿಯಾದ ಆರೋಗ್ಯ ಮಾರ್ಗದರ್ಶನ ಅಗತ್ಯವಾಗಿದೆ ಎಂದು ತಿಳಿಸಿದರು.
ಪೌಷ್ಟಿಕ ಆಹಾರ ಸೇವನೆ, ವೈಯಕ್ತಿಕ ಸ್ವಚ್ಛತೆ, ನಿಯಮಿತ ವ್ಯಾಯಾಮ, ಸಮರ್ಪಕ ನಿದ್ರೆ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳುವುದರಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ ಎಂದು ಹೇಳಿದರು.
ಹದಿ ಹರೆಯದವರಲ್ಲಿ ರಕ್ತಹೀನತೆ ತಡೆ, ಋತುಸ್ರಾವದ ಸ್ವಚ್ಛತೆ, ಮಾನಸಿಕ ಆರೋಗ್ಯ, ವ್ಯಸನಗಳಿಂದ ದೂರವಿರುವುದು, ಲಿಂಗ ಸಮಾನತೆ, ಸುರಕ್ಷಿತ ವರ್ತನೆ ಹಾಗೂ ಆರೋಗ್ಯ ಸಮಸ್ಯೆಗಳ ಕುರಿತು ಆರೋಗ್ಯ ಸಿಬ್ಬಂದಿಯೊಂದಿಗೆ ಮುಕ್ತವಾಗಿ ಚರ್ಚಿಸುವ ಮನೋಭಾವ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.
ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ (RKSK) ಮೂಲಕ ಹದಿ ಹರೆಯದವರಿಗೆ ಆರೋಗ್ಯ ಶಿಕ್ಷಣ, ಸಮಾಲೋಚನೆ ಹಾಗೂ ಅಗತ್ಯ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದ್ದು, "ಆರೋಗ್ಯವಂತ ಹದಿ ಹರೆಯದ ಮಕ್ಕಳು ಆರೋಗ್ಯಕರ ಸಮಾಜದ ಭದ್ರ ಅಡಿಪಾಯ" ಎಂಬ ಸಂದೇಶದೊಂದಿಗೆ ಎಲ್ಲರೂ ಹದಿ ಹರೆಯದವರ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಕರೆ ನೀಡಿದರು.
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಿಷನ್ ಶಕ್ತಿ ಕಾರ್ಯಕ್ರಮದ ಜಿಲ್ಲಾ ಮಿಷನ್ ಸಂಯೋಜಕರಾದ ವಿಜಯಲಕ್ಷ್ಮಿ ಅವರು 'ಬೇಟಿ ಬಚಾವೋ–ಬೇಟಿ ಪಡಾವೋ', ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ, ಹದಿ ಹರೆಯದವರಲ್ಲಿ ಉಂಟಾಗುವ ಗರ್ಭಧಾರಣೆ ಹಾಗೂ ಅದರ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.
ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕಿಯಾದ ಚನ್ನಮ್ಮ ಹಳೆಮನೆ, ಸಮುದಾಯ ಆರೋಗ್ಯ ಅಧಿಕಾರಿ (ಅಊಔ) ರಮೇಶ್, ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಕಾವೇರಿ ವಿವಾದದ ಬಿಸಿ: ಕರ್ನಾಟಕ ಪ್ರವಾಸ ಮುಂದೂಡುವಂತೆ ತಮಿಳುನಾಡು ಸಿಎಂಗೆ ಡಿ.ಕೆ. ಶಿವಕುಮಾರ್ ಮನವಿ



**ಬೆಂಗಳೂರು, ಜುಲೈ 31:** ಕಾವೇರಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಪ್ರತಿಭಟನೆಗಳು ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ, ಆಗಸ್ಟ್ 3ರಂದು ನಿಗದಿಯಾಗಿದ್ದ ತಮ್ಮ ಬೆಂಗಳೂರು ಪ್ರವಾಸವನ್ನು ಮುಂದೂಡುವಂತೆ ಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಅವರು ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರಿಗೆ ಮನವಿ ಮಾಡಿದ್ದಾರೆ.

ವಾತಾವರಣ ತಿಳಿಯಾದ ನಂತರ ಭೇಟಿಗೆ ಮನವಿ
ಶುಕ್ರವಾರ ಬೆಂಗಳೂರಿನಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್, "ತಮಿಳುನಾಡು ಮುಖ್ಯಮಂತ್ರಿಗಳ ಭೇಟಿಗಾಗಿ ನಮ್ಮ ಸರ್ಕಾರ ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿತ್ತು. ಆದರೆ, ಪ್ರಸ್ತುತ ರಾಜ್ಯದಲ್ಲಿ ಕಾವೇರಿ ನೀರು ಬಿಡುಗಡೆ ಆದೇಶದ ವಿರುದ್ಧ ಸಾರ್ವಜನಿಕ ಆಕ್ರೋಶ ಹೆಚ್ಚಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಸಭೆ ನಡೆಸುವುದು ಸೂಕ್ತವಲ್ಲ. ವಾತಾವರಣ ಶಾಂತವಾದ ನಂತರ ಮತ್ತೊಂದು ಅನುಕೂಲಕರ ದಿನಾಂಕದಂದು ಭೇಟಿಯಾಗಿ ಮಾತುಕತೆ ನಡೆಸೋಣ ಎಂದು ಅವರಿಗೆ ವಿನಂತಿಸಿದ್ದೇನೆ" ಎಂದು ತಿಳಿಸಿದರು.

ಕಾವೇರಿ ಪ್ರಾಧಿಕಾರದ ಆದೇಶ ಮತ್ತು ರಾಜ್ಯಾದ್ಯಂತ ಆಕ್ರೋಶ
ಕಾವೇರಿ ನೀರು ನಿಯಂತ್ರಣ ಸಮಿತಿಯ (ಅಘಖಅ) ನಿರ್ದೇಶನವನ್ನು ಎತ್ತಿಹಿಡಿದಿರುವ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು (ಅಘಒಂ), ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ದಿನನಿತ್ಯ 3,500 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ಆದೇಶಿಸಿದೆ. ಈ ನಿರ್ಧಾರವನ್ನು ಖಂಡಿಸಿ ಮಂಡ್ಯ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ರೈತರು ಹಾಗೂ ಕನ್ನಡಪರ ಸಂಘಟನೆಗಳು ಬೀದಿಗಿಳಿದು ತೀವ್ರ ಪ್ರತಿಭಟನೆ ನಡೆಸುತ್ತಿವೆ. ಅಲ್ಲದೆ, ಆಗಸ್ಟ್ 13ರಂದು ರಾಜ್ಯಾದ್ಯಂತ ಬಂದ್‌ಗೆ ಕರೆ ನೀಡಲಾಗಿದೆ.

ಆಗಸ್ಟ್ 2ರಂದು ಸರ್ವಪಕ್ಷ ಸಭೆ
ಕಾವೇರಿ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ನೀರಿನ ಅಭಾವವಿದ್ದರೂ ಪ್ರಾಧಿಕಾರದ ಆದೇಶದಿಂದ ಉಂಟಾಗಿರುವ ಕಾನೂನು ಮತ್ತು ರಾಜಕೀಯ ಸ್ಥಿತಿಗತಿಗಳ ಕುರಿತು ಚರ್ಚಿಸಲು ಆಗಸ್ಟ್ 2ರ ಭಾನುವಾರ ಸರ್ವಪಕ್ಷ ಸಭೆಯನ್ನು ಕರೆಯಲಾಗಿದೆ. ಈ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಪಾತ್ರದ ಸಂಸದರು ಹಾಗೂ ಶಾಸಕರು ಭಾಗವಹಿಸಲಿದ್ದಾರೆ.

ಮೇಕೆದಾಟು ಯೋಜನೆಯಿಂದ
ತಮಿಳುನಾಡಿಗೂ ಅನುಕೂಲ
ಇದೇ ವೇಳೆ ಮೇಕೆದಾಟು ಸಮತೋಲನ ಜಲಾಶಯ ಯೋಜನೆಯ ಕುರಿತು ಮಾತನಾಡಿದ ಶಿವಕುಮಾರ್, "ಮೇಕೆದಾಟು ಯೋಜನೆಯಿಂದ ಕರ್ನಾಟಕಕ್ಕಿಂತ ತಮಿಳುನಾಡಿಗೆ ಹೆಚ್ಚಿನ ಲಾಭವಿದೆ. ಕರ್ನಾಟಕಕ್ಕೆ ಕೇವಲ 400 ಮೆಗಾವಾಟ್ ಜಲವಿದ್ಯುತ್ ಉತ್ಪಾದನೆಯ ಅನುಕೂಲ ಸಿಗಲಿದ್ದು, ನೀರಾವರಿ ವಿಸ್ತರಣೆಗೆ ಇದನ್ನು ಬಳಸಲಾಗುವುದಿಲ್ಲ. ಸುಪ್ರೀಂ ಕೋರ್ಟ್ ತೀರ್ಪಿನ ಅಡಿಯಲ್ಲೇ ಕಾನೂನಾತ್ಮಕವಾಗಿ ಈ ಯೋಜನೆಯನ್ನು ಮುಂದುವರಿಸಲಾಗುವುದು" ಎಂದು ಸ್ಪಷ್ಟಪಡಿಸಿದರು.

# ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಶಾಲಾ ಸಂಸತ್ತು ರಚನೆ

**ರಾಯಚೂರು ಆಗಸ್ಟ್ 01:** ರಾಯಚೂರಿನ ಯರಮರಸ್ ಕ್ಯಾಂಪಿನ ಸರ್ಕಾರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಚುನಾವಣೆ ಮೂಲಕ ಶಾಲಾ ಸಂಸತ್ತು ರಚನೆ ಮಾಡಲಾಯಿತು.
ಚುನಾವಣೆ ಪ್ರಕ್ರಿಯೆ ಸಂಪೂರ್ಣ ಪ್ರಜಾಪ್ರಭುತ್ವದ ಮಾದರಿ ನಡೆಯಿತು. ಮತದಾರರ ಪಟ್ಟಿ, ಬ್ಯಾಲೇಟ್ ಪೇಪರ, ಮತ ಮುದ್ರೆ, ಶಾಹಿ, ಗುರುತಿನ ಚೀಟಿ, ಮತ ಪೆಟ್ಟಿಗೆ ಎಲ್ಲವೂ ಅಚ್ಚುಕಟ್ಟಾಗಿದ್ದವು.
ಪ್ರಜಾಪ್ರಭುತ್ವದ ತತ್ವ ವಿದ್ಯಾರ್ಥಿಗಳಿಗೆ ತಿಳಿಸುವ ನಿಟ್ಟಿನಲ್ಲಿ ಶಾಲೆಯಲ್ಲಿ ಶಾಲಾ ಸಂಸತ್ತು ರಚನೆ ಮಾಡಲು ಚುನಾವಣೆ ಪ್ರಕ್ರಿಯೆ ಅಚ್ಚುಕಟ್ಟಾಗಿ ಪಾಲಿಸುವುದರ ಜತೆಗೆ ಮತದಾನದ ಪ್ರಾತ್ಯಕ್ಷಿಕೆ ನೀಡಲಾಯಿತು. ಮತಗಟ್ಟೆ ಅಧಿಕಾರಿಗಳಾಗಿ ಶಾಲೆಯ ಪ್ರಾಂಶುಪಾಲರಾದ ಅಲಿ ಚಂದ್, ಸಹಾಯಕ ಮತಗಟ್ಟೆ ಅಧಿಕಾರಿ ಯೇಸ್ಸಪ್ಪ ಅವರು ಕರ್ತವ್ಯ ನಿರ್ವಹಿಸಿದರು.

ಶಾಲಾ ಸಂಸತ್ತಿನ ಖಾತೆ ಹಂಚಿಕೆ: ಶಾಲಾ ಸಂಸತ್ತಿನ ನೂತನ ಪ್ರಧಾನಮಂತ್ರಿಯಾಗಿ ದ್ವಿತೀಯ ಪಿಯುಸಿ ವಿದ್ಯಾರ್ಥಿ ಸಲೀಮಾ ಅವರು ಆಯ್ಕೆಯಾದರು. ಉಪ ಪ್ರಧಾನಮಂತ್ರಿಯಾಗಿ ಸುನೀಲ್ ಕುಮಾರ, ಗೃಹ ಮಂತ್ರಿಯಾಗಿ ಶಾಲಂಬೀ, ವಿನಾಯಕ, ಸೃಷ್ಟಿ., ಆರೋಗ್ಯ ಮಂತ್ರಿಯಾಗಿ ಕೆ.ಬಾನು, ಸಾಗರ್, ಅನಿತಾ., ಹಣಕಾಸು ಮಂತ್ರಿಯಾಗಿ ಪ್ರಗತಿ, ಐಶ್ವರ್ಯ, ಅಫ್ರಾಬೇಗಂ., ಆಹಾರ ಮಂತ್ರಿಯಾಗಿ ರವಿ, ಕೆ.ಲತೀಶ್, ಸುವರ್ಣ, ನಾಗರಾಜ., ಶಿಕ್ಷಣ ಮಂತ್ರಿಯಾಗಿ ವಂದನಾ, ಜೋಯ ಅಖ್ತರ್, ಆಕಾಶ್., ಕ್ರೀಡಾ ಮಂತ್ರಿಯಾಗಿ ಲಾಡಖಾನ್, ಕಿಶನ್ ರಾಠೋಡ್, ಅಂಕೀತ್, ಪರಿಸರ ಮಂತ್ರಿಯಾಗಿ ವಿಶಾಲಮ್ಮ, ಪವಾನ್, ದಿವ್ಯ ಭಾರತಿ., ಪ್ರವಾಸೋದ್ಯಮ ಮಂತ್ರಿ ಫರೀದಾ, ಸೂರಜ್, ಇಮ್ತಿಯಾಜ್., ಸಾಂಸ್ಕೃತಿ ಮಂತ್ರಿಯಾಗಿ ಮದಿಯಾ, ಅಲ್ಲಾಭೀಬಾನು, ಹೃತಿಕ್ ಅವರು ಶಾಲಾ ಸಂಸತ್ತಿನ ನೂತನ ಸಚಿವರಾಗಿ ಅಧಿಕಾರ ಸ್ವೀಕರಿಸಿದರು ಎಂದು ಯರಮರಸ್ ಕ್ಯಾಂಪಿನ ಸರ್ಕಾರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ಅಲಿಚಂದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE